ಸಂಪುಟ : 9 ಸಂಚಿಕೆ 263 ಪುಟ : 4 ಬೆಲೆ: 3.00 ಶುಕ್ರವಾರ ನವೆಂಬರ್ 29 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 263 Pages : 4 Price : 3.00 Friday November 29 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### 3ನೇ ಬಾರಿಗೆ ಗದಗ ಜಿಲ್ಲಾ ನೌಕರರ ಸಂಘದ ಅಧ್ಯಕ್ಷರಾಗಿ ಅವಿರೋಧ ಆಯ್ಕೆ!

# ರವಿ ಗುಂಜೀಕರ್ ಹ್ಯಾಟ್ರಿಕ್ ಗೆಲುವು



**■ವಿಜಯಸಾಕ್ಷಿ ಸುದ್ದಿ, ಗದಗ**


ಗದಗ ಜಿಲ್ಲಾ ನೌಕರರ ಸಂಘದ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಮೂರನೇ ಬಾರಿಗೆ ಜಿಲ್ಲಾ ಅಧ್ಯಕ್ಷರಾಗಿ ರವಿ ಗುಂಜೀಕರ್ ಅವಿರೋಧ ಆಯ್ಕೆ ಆಗಿದ್ದು, ಈ ಮೂಲಕ ಹ್ಯಾಟ್ರಿಕ್ ಗೆಲುವು ಸಾಧಿಸಿದ್ದಾರೆ.

2024–29ರ ಅವಧಿಗೆ ನಡೆದ ಚುನಾವಣೆ ಇದಾಗಿದ್ದು, ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾಗಿದ್ದ ರವಿ ಗುಂಜೀಕರ್ ಅವರು ಜಿಲ್ಲಾ ಅಧ್ಯಕ್ಷರಾಗಿ ಆಯ್ಕೆ ಆಗಿದ್ದಾರೆ.

ಇನ್ನೂ ಜಿಲ್ಲಾ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ರವಿ ಗುಂಜೀಕರ್‌ಗೆ ನೌಕರರು ಸನ್ಮಾನಿಸಿ ಗೌರವಿಸಿದರು. ಅಲ್ಲದೇ ಬಣ್ಣ ಹಚ್ಚಿ ಸಿಹಿ ತಿನಿಸುವ ಮೂಲಕ ಸಂಭ್ರಮಿಸಿದರು.

ಈ ವೇಳೆ ಅವಿರೋಧವಾಗಿ ಆಯ್ಕೆ ಮಾಡಿದ ನೌಕರರಿಗೆ ನೂತನ ಅಧ್ಯಕ್ಷ ರವಿ ಗುಂಜೀಕರ್ ಅವರು ಅಭಿನಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಕಂದಾಯ ಇಲಾಖೆಯ ಜಿಲ್ಲಾ ಸಂಘದ ಅಧ್ಯಕ್ಷ ವಾಲ್ಮೀಕಿ, ಹಿಂದುಳಿದ ವರ್ಗಗಳ ತಾಲೂಕಾಧಿಕಾರಿ ಬಸವರಾಜ್ ಬಳ್ಳಾರಿ ಸೇರಿದಂತೆ ನೂರಾರು ನೌಕರರು ಭಾಗಿಯಾಗಿದರು.

2024–29 ನೇ ಸಾಲಿನ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾಗಿ ರವಿ ಎಲ್ ಗುಂಜೀಕರ್ ಮತ್ತು ರಾಜ್ಯ ಪರಿಷತ ಸದಸ್ಯರಾಗಿ ಡಿ ಟಿ ವಾಲ್ಮೀಕಿ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಆಯ್ಕೆಯಾದ ನೂತನ ಸದಸ್ಯರುಗಳಿಗೆ ನೌಕರ ಭವನದಲ್ಲಿ ಹೂ ಮಾಲೆ ಹಾಕಿ ಸನ್ಮಾನಿಸಲಾಯಿತು.




















### ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಸಮಿತಿಗಳ ಸಭೆಯಲ್ಲಿ ಡಿಸಿ ಗೋವಿಂದರೆಡ್ಡಿ

## ಯೋಜನೆಗಳ ಸೌಲಭ್ಯ ಒದಗಿಸಲು ಕ್ರಮವಹಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಹಿಳಾ ಮತ್ತು ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಇಲಾಖೆಯಿಂದ ಅನುಷ್ಠಾನಗೊಂಡಿರುವ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ಒದಗಿಸುವಲ್ಲಿ ಹೆಚ್ಚಿನ ಆಸಕ್ತಿಯಿಂದ ಕೆಲಸ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಮಹಿಳಾ ಇಲಾಖೆಯ ವಿವಿಧ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹ ನಿಷೇಧ ಹಾಗೂ ಫೋಕ್ಸೋ ಕಾಯ್ದೆಯ ಕುರಿತು ಅರಿವು ಮೂಡಿಸುವ ಕೆಲಸವಾಗಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಮೂಲಭೂತ ಸೌಲಭ್ಯಗಳು ಇರುವಂತೆ ನೋಡಿಕೊಳ್ಳಬೇಕು. ಮಹಿಳಾ ಮತ್ತು ಮಕ್ಕಳ ದೌರ್ಜನ್ಯ, ಮಹಿಳೆಯರ ಮತ್ತು ಮಕ್ಕಳ ಸಾಗಾಟ, ಕೌಟುಂಬಿಕ ದೌರ್ಜನ್ಯ ಸೇರಿದಂತೆ ವಿವಿಧ ಪ್ರಕರಣಗಳ ಶೀಘ್ರ ಇತ್ಯರ್ಥಕ್ಕೆ ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.



ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಜಿಲ್ಲೆಯ ಎಲ್ಲ ಶಾಲೆಗಳ ಆವರಣದಲ್ಲಿ ಮಕ್ಕಳಿಗೆ ಸುಲಭವಾಗಿ ಕಾಣುವ ಹಾಗೆ ಮಕ್ಕಳ ಸಹಾಯವಾಣಿ ಸಂಖ್ಯೆಯನ್ನು ಬರೆಸುವ ಕೆಲಸವಾಗಬೇಕು. ಮಕ್ಕಳ ಸಹಾಯವಾಣಿ ಸಂಖ್ಯೆ 1098 ಕುರಿತು ಇನ್ನೂ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಪದ್ಮಾವತಿ ಜಿ ಮಾತನಾಡಿ, ಸಖಿ ಒನ್ ಸ್ಟಾಪ್ ಸೆಂಟರ್ ಯೋಜನೆಯಡಿ ಜಿಲ್ಲೆಯ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಕಾಲೇಜುಗಳಲ್ಲಿ 11, ಅಂಗನವಾಡಿ ಕೇಂದ್ರದಲ್ಲಿ 5, ಜಿಮ್ಸ್ ಆಸ್ಪತ್ರೆ ಹಾಗೂ ಸಂಘ–ಸಂಸ್ಥೆಗಳಲ್ಲಿ 13 ಅರಿವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಮಹಿಳೆಯರ ಮತ್ತು ಮಕ್ಕಳ ದೌರ್ಜನ್ಯ ತಡೆ ಹಾಗೂ ಮಹಿಳೆಯರ ಮತ್ತು ಮಕ್ಕಳ ಸಾಗಾಟ ತಡೆ ಯೋಜನೆಯಡಿ ತಾಲೂಕು ಮಟ್ಟದಲ್ಲಿ 5 ಸಭೆಗಳನ್ನು ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ 122 ಸಭೆಗಳನ್ನು ಆಯೋಜಿಸಿ ಅರಿವು ಮೂಡಿಸಲಾಗಿದೆ. ಜುಲೈ 2024ರಿಂದ ಸೆಪ್ಟೆಂಬರ್ 2024ರವರೆಗೆ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆಯಡಿ ಒಟ್ಟು 23 ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ ಎಂದು ಸಭೆಗೆ ವಿವರಿಸಿದರು.

ಸಭೆಯಲ್ಲಿ ಸ್ವಾಧಾರ ಗೃಹ ಯೋಜನೆ, ಉಜ್ವಲ ಯೋಜನೆ, ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆ, ಸ್ವೀಕಾರ ಕೇಂದ್ರ, ಬಾಲಕಿಯರ ವಸತಿನಿಲಯ ಯೋಜನೆ, ವಿಧವಾ ಕೋಶ, ಪೋಷಣ ಅಭಿಯಾನ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ.ಮೀನಾಕ್ಷಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ಕಾರ್ಮಿಕ ಇಲಾಖೆ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ರಾಧಾ ಮಣ್ಣೂರ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಗದುಗಿನಲ್ಲಿ ದಿ ಶಿರಸಿ ಅರ್ಬನ್ ಸಹಕಾರಿ ಬ್ಯಾಂಕ್‌ನ ಶಾಖೆ ಉದ್ಘಾಟನೆ

## ಗ್ರಾಹಕರ ಸೇವೆಯೇ ಬ್ಯಾಂಕಿನ ಧ್ಯೇಯ

**■ವಿಜಯಸಾಕ್ಷಿ ಸುದ್ದಿ, ಗದಗ**

ದಿ ಶಿರಸಿ ಅರ್ಬನ್ ಸಹಕಾರಿ ಬ್ಯಾಂಕ್ ಸುದೀರ್ಘ 119 ವರ್ಷಗಳ ಇತಿಹಾಸ ಹೊಂದಿದೆ. ರಾಜ್ಯದ ಎಲ್ಲ ಜಿಲ್ಲೆ, ತಾಲೂಕು ಕೇಂದ್ರಗಳಲ್ಲಿ ಮಾತ್ರವಲ್ಲದೇ ಮಹಾರಾಷ್ಟ್ರ, ಗೋವಾದಲ್ಲಿಯೂ ಶಾಖೆಗಳನ್ನು ತೆರೆಯುವ ಮೂಲಕ ರಾಷ್ಟ್ರಮಟ್ಟದ ಬ್ಯಾಂಕ್ ಮಾಡುವ ಸಂಕಲ್ಪ ಹೊಂದಿದ್ದೇವೆ ಎಂದು ಬ್ಯಾಂಕಿನ ಅಧ್ಯಕ್ಷ ಜಯದೇವ ನಿಲೇಕಣಿ ಹೇಳಿದರು.

ಇಲ್ಲಿನ ಎಪಿಎಂಸಿ ರಸ್ತೆಯ ಮಾನ್ವಿ ಬಿಲ್ಡಿಂಗ್‌ನಲ್ಲಿ ಗುರುವಾರ ನಡೆದ ದಿ ಶಿರಸಿ ಅರ್ಬನ್ ಸಹಕಾರಿ ಬ್ಯಾಂಕಿನ 20ನೇ ಶಾಖೆಯ ಉದ್ಘಾಟನಾ ಸಮಾರಂಭದಲ್ಲಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ನೂತನ ಶಾಖೆಯನ್ನು ಉದ್ಘಾಟಿಸಿ ಮಾತನಾಡಿದ ಗಣ್ಯ ಉದ್ಯಮಿ ಪ್ರಕಾಶ ಭೂಮಾ, ಉತ್ತರ ಕರ್ನಾಟಕ ಭಾಗದಲ್ಲಿ ಪ್ರಸಿದ್ಧಿಯಾದ ಬಸವೇಶ್ವರ ಖಾನಾವಳಿ ಮಾಲೀಕರು ಆದಿಯಾಗಿ ಅನೇಕರು ದಿ ಶಿರಸಿ ಅರ್ಬನ್ ಸಹಕಾರಿ ಬ್ಯಾಂಕಿನ ಸಾಲ ಪಡೆದು ವ್ಯವಹಾರವನ್ನು ವಿಸ್ತರಿಸಿ ಅಭಿವೃದ್ಧಿ ಹೊಂದಿದ್ದಾರೆ. ರಾಷ್ಟ್ರೀಯ ಬ್ಯಾಂಕಿಗಿಂತ ಹೆಚ್ಚು ಅನುಕೂಲ ಕಲ್ಪಿಸುತ್ತಿರುವ ಈ ಬ್ಯಾಂಕ್, ಗದಗ ಪರಿಸರದಲ್ಲಿಯೂ ಉತ್ತಮ ಸೇವೆ ನೀಡುವ ವಿಶ್ವಾಸವಿದೆ ಎಂದರು.



ಗಣ್ಯ ಉದ್ಯಮಿ ಕಿರಣ ಭೂಮಾ ಮಾತನಾಡಿ, ದಿ ಶಿರಸಿ ಅರ್ಬನ್ ಸಹಕಾರಿ ಬ್ಯಾಂಕ್ ಕರ್ನಾಟಕದ ಅಗ್ರ ಸಹಕಾರಿ ಬ್ಯಾಂಕುಗಳಲ್ಲಿ ಒಂದಾಗಿದೆ. ದೇಶದ ತುಂಬೆಲ್ಲಾ ಇದರ ಶಾಖೆಗಳು ಆರಂಭವಾಗಿ, ಗ್ರಾಹಕರಿಗೆ ಉತ್ತಮ ಸೇವೆ ನೀಡಲಿ ಎಂದು ಆಶಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮಹಾರುದ್ರಪ್ಪ ಭೂಸ್ತ, ಕುಮಾರ ಮಾನ್ವಿ ಶುಭ ಕೋರಿದರು. ಈ ಸಂದರ್ಭದಲ್ಲಿ ಸಂತೋಷ ಪಂಡಿತ, ನಿತಿನ್ ಕಾಸರಕೋಡ, ಮಿಲಿಂದ ಪಂಡಿತ, ಮೋಹನ ಪ್ರಭು, ಸದಾನಂದ ನಾಯ್ಕ, ಟಿ.ಎಸ್. ಬಾಲಮಣಿ, ರಾಮಕೃಷ್ಣ ಪಾಲೇಕರ, ಸುವರ್ಣಾ ಪ್ರಭು, ಸುರೇಂದ್ರ ರೇವಣಕರ, ವರೀಂದ್ರ ಕಾಮತ, ಪ್ರಕಾಶ ಪೈ, ಸೂರ್ಯಕಾಂತ ದೇವಳಿ, ಕೆ.ಎನ್. ಹೊಸಮನಿ, ಸಂತೋಷ ಉಡ್ಲಿಕರ್, ವಂದನಾ ಕಾಮತ, ರಾಜೇಶ ಧಾಕಪ್ಪ, ಬ್ರುನೋ ಮಸ್ಕರೆನಸ್, ಟಿ. ಶ್ರೀಧರಮೂರ್ತಿ, ಸುಬ್ರಾವ್ ಗಾಯತೊಂಡೆ, ಕೆ.ಎಸ್. ಶ್ರೀನಿವಾಸ, ಸತೀಶ ಬಾಡಗಾಂವಕರ್, ರಾಮಚಂದ್ರ ಕಿಣಿ ಮುಂತಾದವರು ಉಪಸ್ಥಿತರಿದ್ದರು.

1904ರಲ್ಲಿ ಕಣಗಿನಹಾಳದ ಸಿದ್ದನಗೌಡ ಪಾಟೀಲರು ಸಹಕಾರಿ ಆಂದೋಲನ ಆರಂಭಿಸಿದ ಕಾಲದಲ್ಲಿ ನೋಂದಣಿಯಾದ ಈ ಬ್ಯಾಂಕ್, ಇಂದು 20 ಶಾಖೆಯನ್ನು ಆರಂಭಿಸುತ್ತಿದೆ. ಗ್ರಾಹಕರ ಸೇವೆಯನ್ನೇ ಮೂಲ ಧ್ಯೇಯವಾಗಿಸಿಕೊಂಡು ಮುನ್ನಡೆಯುತ್ತಿರುವ ದಿ ಶಿರಸಿ ಅರ್ಬನ್ ಸಹಕಾರಿ ಬ್ಯಾಂಕ್, ಗದಗದಲ್ಲಿಯೂ ತನ್ನ ಕಾರ್ಯಕ್ಷೇತ್ರವನ್ನು ವಿಸ್ತರಿಸುತ್ತಿದೆ. ಕುಮಾರವ್ಯಾಸರ ಪುಣ್ಯಭೂಮಿಯ ಜನರ ಪ್ರೀತಿ–ವಿಶ್ವಾಸದೊಂದಿಗೆ ಬ್ಯಾಂಕ್ ಜೊತೆಗೆ ಗ್ರಾಹಕರಿಗೂ ಲಾಭ ಮಾಡಿಕೊಡುವ ಸಂಕಲ್ಪ ಹೊಂದಿದೆ.

– **ಜಯದೇವ ನಿಲೇಕಣಿ.** ಅಧ್ಯಕ್ಷರು, ದಿ ಶಿರಸಿ ಅರ್ಬನ್ ಸಹಕಾರಿ ಬ್ಯಾಂಕ್.

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ನವೆಂಬರ್ 30 ಮತ್ತು ಡಿಸೆಂಬರ್ 1 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವರ ಈ ಕೆಳಗಿನಂತಿದೆ.

ನವೆಂಬರ್ 30 ರಂದು ಬೆಳಿಗ್ಗೆ 10 ಗಂಟೆಗೆ ಬಿಂಕದಕಟ್ಟಿಯಲ್ಲಿ ರಾಮಕರುಣಾನಂದ ಮಹಾರಾಜರ ಚರಿತ್ರೆ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಗ್ರಾಮ ಪಂಚಾಯತಿ ಕಟ್ಟಡ ವೀಕ್ಷಣೆ ಮಾಡುವರು. ಬೆಳಿಗ್ಗೆ 10.30 ಗಂಟೆಗೆ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಜರುಗುವ ಗದಗ ಜಿಲ್ಲಾ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆ ಕುರಿತು ಕಾರ್ಯಾಗಾರ ಹಾಗೂ ಶೈಕ್ಷಣಿಕ ಸಮಾವೇಶದಲ್ಲಿ ಪಾಲ್ಗೊಳ್ಳುವರು. ಸಾಯಂಕಾಲ 4 ಗಂಟೆಗೆ ಜಿ.ಎಸ್.ಪಾಟೀಲ್ ಲೇಔಟ್ ಸಂಸ್ಥೆಯ ಕಾರ್ಯಾಲಯದಲ್ಲಿ ಡಾ.ಎಮ್.ಜೆ.ಜೀವಣ್ಣನವರಿಗೆ ಸನ್ಮಾನ ಸಮಾರಂಭದಲ್ಲಿ ಭಾಗವಹಿಸುವರು. ಸಾಯಂಕಾಲ 5 ಗಂಟೆಗೆ ಕಳಸಾಪುರ ರಿಂಗ್ ರಸ್ತೆ ಕ್ರಾಸ್‌ನಲ್ಲಿ ಫೈಮ್ ಸ್ಪೋರ್ಟ್ಸ್ ಪಾರ್ಕ್ ಬಾಕ್ಸ್ ಟರ್ಫ್ ಕ್ರಿಕೆಟ್ ಮತ್ತು ಪುಟ್‌ಬಾಲ್ ಕ್ರೀಡಾಂಗಣದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಸಾಯಂಕಾಲ 5.30 ಗಂಟೆಗೆ ನಗರದ ಗಾಂಧಿ ವೃತ್ತದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿಮೆ ಹತ್ತಿರ ಕರ್ನಾಟಕ ರಕ್ಷಣಾ ವೇದಿಕೆ ಇವರಿಂದ ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ಕನ್ನಡೋತ್ಸವ ಸಾಂಸ್ಕೃತಿಕ ಸಂಭ್ರಮ ಮತ್ತು ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ಭಾಗವಹಿಸುವರು.

ಸಾಯಂಕಾಲ 7 ಗಂಟೆಗೆ ಹುಲಕೋಟಿಯ ಶ್ರೀ ಹನುಮಂತ ದೇವರ ದೇವಸ್ಥಾನದ ಕಾರ್ತಿಕೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಡಿಸೆಂಬರ್ 1 ರಂದು ಬೆಳಿಗ್ಗೆ 10.30 ಗಂಟೆಗೆ ಹಿರೇಹಂದಿಗೋಳದ ಶರಣಬಸವೇಶ್ವರ ಕಲ್ಯಾಣಮಂಟಪ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ನಂತರ ಬೆಳಿಗ್ಗೆ 11 ಗಂಟೆಗೆ ಅದೇ ಗ್ರಾಮದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ ನೂತನ ಕೊಠಡಿಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು, ಮತ್ತು 11.30 ಗಂಟೆಗೆ ಅಂಗನವಾಡಿ ಕಟ್ಟಡದ ಭೂಮಿ ಪೂಜಾ ಕಾರ್ಯಕ್ರಮ ನೆರವೇರಿಸುವರು. ಮಧ್ಯಾಹ್ನ 12 ಗಂಟೆಗೆ ಡಂಬಳ ಗ್ರಾಮದ ಕೆರೆಗೆ ಬಾಗಿನ ಅರ್ಪಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.



ರೋಣ ಮತ್ತು ಗಜೇಂದ್ರಗಡ ತಾಲೂಕಿನ ಎಲ್ಲಾ ಅನುದಾನರಹಿತ ಶಾಲೆಗಳ ಶಿಕ್ಷಕರು 1995ರ ನಂತರದ ಕನ್ನಡ ಮಾಧ್ಯಮ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಬೇಕೆಂದು ರೋಣ ಮತಕ್ಷೇತ್ರದ ಶಾಸಕರಾದ ಜಿ.ಎಸ್. ಪಾಟೀಲರಿಗೆ ಮನವಿ ಸಲ್ಲಿಸಿದರು.

---

**ಶಿರಡಿ ಸಾಯಿಬಾಬಾ ಮಂದಿರದಲ್ಲಿ ಜರುಗಿದ ಕಾರ್ತೀಕ ದೀಪೋತ್ಸವದಲ್ಲಿ ರಂಭಾಪುರಿ ಶ್ರೀಗಳು**

# ಉತ್ತಮ ಸ್ನೇಹ ಪ್ರಜ್ವಲಿಸುವ ಜ್ಯೋತಿಯಂತೆ

■ವಿಜಯಸಾಕ್ಷಿ ಸುದ್ದಿ, ಬ್ಯಾಡಗಿ

ಬದುಕು ಕೊಟ್ಟ ಭಗವಂತನ ಲೀಲೆ ಅದ್ಭುತ. ಬದುಕು ಅನ್ನುವುದು ಕಷ್ಟ-ಸುಖ, ನೋವು-ನಲಿವು ಸಮಸ್ಯೆಗಳ ಸಾಗರದಲ್ಲಿ ಚಲಿಸುವ ದೋಣಿ ಇದ್ದಂತೆ. ಬೇರೆ ಯಾರೋ ಚಲಾಯಿಸಿ ದಡ ಸೇರಿಸುವರೆಂಬ ಭ್ರಮೆ ಬೇಡ. ನಮ್ಮ ಬದುಕಿನ ದೋಣಿಗೆ ನಾವೇ ನಾಯಕರು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ನಗರದ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಜರುಗಿದ ಕಾರ್ತೀಕ ದೀಪೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಒಳ್ಳೆಯ ಸ್ನೇಹ ಅದೊಂದು ಪ್ರಜ್ವಲಿಸುವ ಜ್ಯೋತಿ. ಅದು ಕತ್ತಲಲ್ಲಿ ದಾರಿ ತೋರಬಲ್ಲದು. ಆಪತ್ಕಾಲದಲ್ಲಿ ನೆರವು ನೀಡಬಲ್ಲದು. ಹೊರಗಿನ ಕತ್ತಲೆ ಕಳೆಯಲು ಹಣತೆ ಬೇಕು. ಒಳಗಿರುವ ಕತ್ತಲೆ ಕಳೆಯಲು ಒಬ್ಬ ಗುರು ಬೇಕು. ಎದುರಿಗಿರುವ ಶತ್ರುಗಳನ್ನು ಎದುರಿಸುವುದು ಸುಲಭ. ಆದರೆ ಮಿತ್ರರಂತೆ ನಟಿಸುತ್ತ ಜೊತೆಗಿರುವ ಶತ್ರುವನ್ನು ಎದುರಿಸುವುದು ಬಲು ಕಷ್ಟ. ಮನುಷ್ಯನಲ್ಲಿ ದಡ್ಡತನ ಇದ್ದರೂ ಪರವಾಗಿಲ್ಲ. ಆದರೆ



ಸಣ್ಣತನ ಇರಬಾರದು. ಯಾಕೆಂದರೆ ಮನುಷ್ಯ ಗೌರವ ಕಳೆದುಕೊಳ್ಳುವುದು ದಡ್ಡತನದಿಂದಲ್ಲ, ಸಣ್ಣತನದಿಂದ ಎಂಬುದನ್ನು ಮರೆಯಬಾರದು. ನಂಬಿ ಬದುಕುವುದರಲ್ಲಿ ಸುಖ ಶಾಂತಿಯಿದೆ. ಧರ್ಮದ ಆಶ್ರಯದಲ್ಲಿ ಮನುಷ್ಯ ಮುನ್ನಡೆದರೆ ಬಾಳು ಉಜ್ವಲಗೊಳ್ಳುತ್ತದೆ. ಶಿರಡಿ ಸಾಯಿಬಾಬಾ ಮಂದಿರದಲ್ಲಿ ಪ್ರತಿ ವರುಷ ಮಂಜುನಾಥ ಶಾಸ್ತ್ರಿಗಳು ಕಾರ್ತೀಕ ದೀಪೋತ್ಸವದ ಮೂಲಕ ಹಲವಾರು ರಚನಾತ್ಮಕ ಕಾರ್ಯಗಳನ್ನು ಮಾಡುತ್ತಿರುವುದು ತಮಗೆ ಸಂತೋಷ ತಂದಿದೆ ಎಂದರು. ಈ ಪವಿತ್ರ ಸಮಾರಂಭದಲ್ಲಿ ಮಳಲಿಮಠದ ಡಾ. ನಾಗಭೂಷಣ ಶಿವಾಚಾರ್ಯರು, ರಾಣೆಬೆನ್ನೂರು ಶಿವಯೋಗಿ ಶಿವಾಚಾರ್ಯರು, ಸಂಗೊಳ್ಳಿ ಗುರುಲಿಂಗ ಶಿವಾಚಾರ್ಯರು, ಕಡೇನಂದಿಹಳ್ಳಿ ರೇವಣಸಿದ್ಧೇಶ್ವರ ಶಿವಾಚಾರ್ಯರು, ಗುಡ್ಡದಮಲ್ಲಾಪುರದ ಮೂಕಪ್ಪ ಶಿವಾಚಾರ್ಯರು, ಬ್ಯಾಡಗಿ ಚನ್ನಮಲ್ಲಿಕಾರ್ಜುನ ಸ್ವಾಮಿಗಳು ಪಾಲ್ಗೊಂಡಿದ್ದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಪುರಸಭೆ ಮಾಜಿ ಅಧ್ಯಕ್ಷ ಮುರಿಗೆಪ್ಪ ಎಚ್.ಶೆಟ್ಟರ್, ಸುನಂದಾ ಕೆ.ರವೀಂದ್ರ ಕುಂಕೋದ, ಇಂದುಧರಯ್ಯ ಹಿರೇಮಠ, ಚಂದ್ರಪ್ಪ ಕಾರಗಿ, ಗಿರೀಶಗೌಡ್ರು ಪಾಟೀಲ ಸೇರಿದಂತೆ ಹಲವಾರು ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

ಶಿರಡಿ ಸಾಯಿಬಾಬಾ ಮಂದಿರದ ಮುಖ್ಯಸ್ಥರಾದ ಮಂಜುನಾಥ ಶಾಸ್ತ್ರಿಗಳು ಸ್ವಾಗತಿಸಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ಶೋಭಾ ಶಿವಾನಂದ ಮಲ್ಲನಗೌಡ್ರ ಇವರಿಂದ ಪ್ರಾರ್ಥನೆ ಜರುಗಿತು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು. ಬೆಳಿಗ್ಗೆ ಲೋಕಕಲ್ಯಾಣಕ್ಕಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಪೂಜಾ ನೆರವೇರಿಸಿದರು. ಸಮಾರಂಭದ ನಂತರ ಕಾರ್ತೀಕ ದೀಪೋತ್ಸವ ಸಂಭ್ರಮದಿಂದ ಜರುಗಿತು.

> ಸಮಾರಂಭವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿದ ಮಾಜಿ ಶಾಸಕರಾದ ವಿರುಪಾಕ್ಷಪ್ಪ ಬಳ್ಳಾರಿ ಮಾತನಾಡಿ, ಇಂದಿನ ವೈಚಾರಿಕ ಯುಗದಲ್ಲಿ ನಮ್ಮ ಧರ್ಮ, ಸಂಸ್ಕೃತಿ ಮತ್ತು ಪರಂಪರೆ ಉಳಿಸುವ, ಬೆಳೆಸುವ ಜವಾಬ್ದಾರಿ ಎಲ್ಲರ ಮೇಲಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ನಿರಂತರ ಧರ್ಮ ಯಜ್ಞ ಸಕಲರ ಜೀವಾತ್ಮದ ಬಾಳಿಗೆ ಬೆಳಕು ತೋರುತ್ತದೆ ಎಂದರು.

---

**ಶ್ರೀ ವೀರಭದ್ರೇಶ್ವರ ಕಾರ್ತಿಕೋತ್ಸವ ಸಮಾರಂಭದಲ್ಲಿ ಚನ್ನವೀರ ಸ್ವಾಮೀಜಿ**

# ವೀರಭದ್ರ ದೇವರು ಪಿತೃವಾಕ್ಯ ಪರಿಪಾಲಕ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ವೀರಭದ್ರ ದೇವರು ದುಷ್ಟರ ಶಿಕ್ಷಕ, ಶಿಷ್ಟರ ರಕ್ಷಕನಾಗಿದ್ದಾನೆ. ಪಿತೃವಾಕ್ಯ ಪರಿಪಾಲಿಸುವುದಕ್ಕಾಗಿ ದಕ್ಷಬ್ರಹ್ಮನ ಶಿರವನ್ನು ಹಾರಿಸಿದ. ಅದಕ್ಕಾಗಿಯೇ ವೀರಭದ್ರ ದೇವರು ಪಿತೃವಾಕ್ಯ ಪರಿಪಾಲನೆಯ ಸಂಕೇತವಾಗಿದ್ದಾನೆ. ಅದರಂತೆಯೇ ಪ್ರತಿಯೊಬ್ಬರೂ ತಂದೆ-ತಾಯಿಗೆ ವಿಧೇಯರಾಗಿ ವೀರಭದ್ರ ದೇವರ ಆದರ್ಶವನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಹೂವಿನಶಿಗ್ಲಿ ವಿರಕ್ತಮಠದ ಚನ್ನವೀರ ಸ್ವಾಮೀಜಿ ಹೇಳಿದರು.

ಅವರು ಮಂಗಳವಾರ ರಾತ್ರಿ ಶಿರಹಟ್ಟಿ ಪೇಟೆಯ 42ನೇ ವರ್ಷದ ಶ್ರೀ ವೀರಭದ್ರೇಶ್ವರ ಕಾರ್ತಿಕೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಆದಿ-ಅನಾದಿ ಕಾಲದಿಂದೂ ಸಹ ದೀಪಕ್ಕೆ ತನ್ನದೇ ಆದ ವೈಶಿಷ್ಟ್ಯತೆ ಇದ್ದು, ತ್ರಿಮೂರ್ತಿಗಳು ಸಹ ಜ್ಯೋತಿ ರೂಪವಾಗಿದ್ದಾರೆ. ಕತ್ತಲಿನಿಂದ ಬೆಳಕಿನ ಕಡೆಗೆ ಕೊಂಡೊಯ್ಯುವುದೇ ಕಾರ್ತಿಕೋತ್ಸವದ ಉದ್ದೇಶವಾಗಿದೆ. ಪ್ರಸ್ತುತ ದಿನಮಾನದಲ್ಲಿ ವಿಜ್ಞಾನ



ನೆಮ್ಮದಿ ಹಾಳು ಮಾಡುತ್ತಿದೆ. ವಿಜ್ಞಾನ ನಾಡಿಗೆ ಸಮೃದ್ಧಿ ಕೊಡುತ್ತದೆ, ವಿಜ್ಞಾನವು ಬೇಕು, ಜೊತೆಗೆ ಮನುಷ್ಯ ಮೃಗನಂತೆ ವರ್ತನೆ ಮಾಡುವುದನ್ನು ಬಿಟ್ಟು ಜೀವನವನ್ನು ಸಾರ್ಥಕಗೊಳಿಸಿಕೊಳ್ಳಲು ಆಧ್ಯಾತ್ಮ ಜೀವನದತ್ತ ಸಾಗುವುದು ಅವಶ್ಯವಿದೆ. ಕಾರ್ತಿಕ ಮಾಸದಲ್ಲಿ ದೇವರನ್ನು ಸಂಪ್ರೀತಗೊಳಿಸುವುದಕ್ಕಾಗಿ ದೀಪಾರಾಧನೆ ಮಾಡಬೇಕು. ಸಮಾಜಕ್ಕೆ, ನಾಡಿಗೆ, ಗ್ರಾಮಕ್ಕೆ ಬೆಳಗುವ ಜ್ಯೋತಿ ನೀವಾಗಬೇಕೆಂದು ಹೇಳಿದರು.

ನಂತರ ಅಡವಿಸೋಮಾಪೂರದ ಶ್ರೀ ಸಿದ್ದಲಿಂಗೇಶ್ವರ ಜಾನಪದ ಕಲಾತಂಡದ ವತಿಯಿಂದ ಅಹೋರಾತ್ರಿ ಜಾನಪದ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಂದ್ರಕಾಂತ ನೂರಶೆಟ್ಟರ, ಎಸ್.ಬಿ. ಹೊಸೂರ, ಮುತ್ತಣ್ಣ ಮಜ್ಜಗಿ, ಸಿದ್ದು ಹೊಸೂರ, ಸುರೇಶ ಹವಳದ, ಶಿವು ಪಟ್ಟಣಶೆಟ್ಟರ, ಬಸವರಾಜ ರಾಜಮನಿ, ಬಸವರಾಜ ಭೋರಶೆಟ್ಟರ, ಮಂಜು ರಿತ್ತಿ ಮುಂತಾದವರು ಉಪಸ್ಥಿತರಿದ್ದರು.

> ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಕಾರ್ತಿಕ ಮಾಸದಲ್ಲಿ ಮಣ್ಣಿನ ಆರಾಧನೆ ಮಾಡುವುದಕ್ಕೆ ವೈಜ್ಞಾನಿಕ ಹಾಗೂ ಪೌರಾಣಿಕ ಹಿನ್ನೆಲೆಯಿದ್ದು, ಸೃಷ್ಟಿಯ ಕಾರಣ ಮಣ್ಣು, ಮಣ್ಣಿನಿಂದಲೇ ಜಗತ್ತು ನಡೆಯುತ್ತಿದೆ. ದೀಪ ಜಡತ್ವವನ್ನು ಕಳೆಯುವ ಸಂಕೇತ, ಬೆಳಕು ಚೈತನ್ಯ, ಜೀವಂತಿಕೆಯ ಸಂದೇಶವಾಗಿದೆ. ವೇದ-ಉಪನಿಷತ್‌ಗಳಲ್ಲಿ ಅಗ್ನಿಗೆ ವಿಶೇಷ ಸ್ಥಾನವಿದೆ. ಇಂತಹ ಮಾಸದಲ್ಲಿ ಪ್ರತಿಯೊಬ್ಬರಿಗೂ ಸತ್ಸಂಗದ ಅವಶ್ಯವಿದ್ದು, ಜೀವನದಲ್ಲಿ ಹೇಗೆ ಬದುಕನ್ನು ಸಾಗಿಸಬೇಕು ಎನ್ನುವ ವಿಚಾರವನ್ನು ಇಂತಹ ಪೂಜ್ಯರ ಉಪನ್ಯಾಸಗಳಿಂದ ತಿಳಿದುಕೊಳ್ಳುವುದು ಅವಶ್ಯವಿದೆ ಎಂದರು.

---

**ಕಪ್ಪತಗುಡ್ಡದಲ್ಲಿ ಗಣಿಗಾರಿಕೆಗೆ ಅವಕಾಶ ನೀಡದಂತೆ ಜಯ ಕರ್ನಾಟಕ ಸಂಘಟನೆಯ ಮನವಿ**

# ಗಣಿಗಾರಿಕೆಗೆ ಕಂಪನಿಗಳ ಹುನ್ನಾರ



■ವಿಜಯಸಾಕ್ಷಿ ಸುದ್ದಿ, ಗದಗ

ಕಪ್ಪತಗುಡ್ಡ ವನ್ಯಜೀವಿಧಾಮ ಪರಿಧಿಯ 10 ಕಿ.ಮೀ ವ್ಯಾಪ್ತಿಯಲ್ಲಿ ಯಾವುದೇ ಗಣಿಗಾರಿಕೆ ಕೈಗೊಳ್ಳದಂತೆ ನಿಷೇಧಿಸುವ ಕುರಿತು ಕೇಂದ್ರ ಸರಕಾರಕ್ಕೆ ತಕ್ಷಣ ಆಕ್ಷೇಪಣಾ ಪತ್ರ ಸಲ್ಲಿಸುವಂತೆ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಜಯ ಕರ್ನಾಟಕ ಸಂಘಟನೆಯ ಗದಗ ಜಿಲ್ಲಾ ಘಟಕದ ವತಿಯಿಂದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿ ಮಾತನಾಡಿದ ಜಯ ಕರ್ನಾಟಕ ಸಂಘಟನೆಯ ರಾಜ್ಯ ಉಪಾಧ್ಯಕ್ಷ ಚಂದ್ರಕಾಂತ ಚವ್ಹಾಣ, ಕಪ್ಪತ್ತಗುಡ್ಡವನ್ನು ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದೇ ಕರೆಯಲಾಗುತ್ತದೆ. ಪಂಚಲೋಹಗಳ ಗುಡ್ಡವಾಗಿರುವುದರಿಂದ ಇಲ್ಲಿ ಬೆಳೆಯುವ ವನಸ್ಪತಿಗಳು ನಾನಾ ರೋಗಗಳ ನಿವಾರಣೆಗೆ ಪರಿಣಾಮಕಾರಿಯಾಗಿವೆ. ಕಪ್ಪತ್ತಗುಡ್ಡ ಇಂದಿಗೂ ತನ್ನ ಮಣ್ಣು, ಗಿಡ, ಮರಗಳೆಲ್ಲದರಲ್ಲೂ ಔಷಧೀಯ ಗುಣ ಹೊಂದಿದೆ. ಸುಮಾರು 500ಕ್ಕೂ ಹೆಚ್ಚು ಔಷಧಿ ಸಸ್ಯರಾಶಿಯೂ ಗಿಡಮೂಲಿಕೆಗಳು ಇಲ್ಲಿವೆ.

ಜಿಲ್ಲೆಯಲ್ಲಿ ಕಪ್ಪತಗುಡ್ಡ ಸೇರಿದಂತೆ ಕೇವಲ ಶೇ.7ರಷ್ಟು ಮಾತ್ರ ಅರಣ್ಯ ಪ್ರದೇಶವಿದೆ. ಒಂದು ವೇಳೆ ಕಪ್ಪತಗುಡ್ಡ ಕರಗಿದರೆ ಜಿಲ್ಲೆಯಲ್ಲಿ ಅರಣ್ಯ ಪ್ರದೇಶವೇ ಇಲ್ಲದಂತಾಗುತ್ತದೆ. ಇದರಿಂದ ಕೃಷಿ, ಜನ-ಜಾನುವಾರು, ವನ್ಯಜೀವಿಗಳಿಗೆ ಮರಣ ಶಾಸನ ಬರೆದಂತಾಗುತ್ತದೆ. ಕಪ್ಪತ್ತಗುಡ್ಡದಲ್ಲಿ ಗಣಿಗಾರಿಕೆ ನಡೆಸಲು ಹಲವು ಕಂಪನಿಗಳು ಹುನ್ನಾರ ನಡೆಸಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಂಘಟನೆಯ ಉಪಾಧ್ಯಕ್ಷ ಭಾಷಾಸಾಬ ಮಲ್ಲಸಮುದ್ರ ಮಾತನಾಡಿ, ಅರಣ್ಯ ಇಲಾಖೆಗೆ ಕಂಪನಿಗಳ ಅರ್ಜಿ ತಿರಸ್ಕರಿಸಿದರೂ ಗಣಿಗಾರಿಕೆ ನಡೆಸಲು ಅವಕಾಶ ಮಾಡಿಕೊಡುವಂತೆ ಪದೇ ಪದೇ ಸರ್ಕಾರ ಹಾಗೂ ಅರಣ್ಯ ಇಲಾಖೆಗೆ ಅರ್ಜಿ ಸಲ್ಲಿಸುತ್ತಿದ್ದಾರೆ. ಉತ್ತರ ಕರ್ನಾಟಕದ ಸಹ್ಯಾದ್ರಿ, ಜೀವವೈವಿಧ್ಯ ತಾಣ, ಅಪಾರ ಖನಿಜ ಸಂಪತ್ತಿನ ಆಗರ ಕಪ್ಪತಗುಡ್ಡ ನೆತ್ತಿ ಮೇಲೆ ಆತಂಕದ ಕತ್ತಿ ನೇತಾಡುತ್ತಿದೆ. ಉತ್ತರ ಕರ್ನಾಟಕದ ಜಿಲ್ಲೆಗಳ ಪರಿಸರ ಸಮತೋಲನ ಕಾಯುವ ಕಪ್ಪತಗುಡ್ಡಕ್ಕೆ ಎದುರಾಗಿರುವ ಆತಂಕವು ನಿದ್ದೆಗೆಡಿಸಿದೆ ಎಂದರು.

---

# ಗೋ.ರು.ಚ ಅವರ ಸೇವೆ ಅನುಪಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಜನಪದ ಮತ್ತು ಶರಣ ಸಾಹಿತ್ಯ ಪರಿಷತ್ತಿಗೆ ಗೋ.ರು. ಚನಬಸಪ್ಪ ಅವರ ಸೇವೆ ಅನುಪಮ ಎಂದು ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ ಹೇಳಿದರು.

ಅವರು ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆಗಳ ಆಶ್ರಯದಲ್ಲಿ ನಡೆದ ಗೋ.ರು. ಚನಬಸಪ್ಪ ಕುರಿತ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ನಾಡಿನ ಉದ್ದಗಲಕ್ಕೂ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯ ಚಟುವಟಿಕೆ ನಡೆಯುವಂತೆ ಮಾಡಿದ ಕೀರ್ತಿ ಗೋ.ರು. ಚನಬಸಪ್ಪ ಅವರಿಗೆ ಸಲ್ಲುತ್ತದೆ. ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸಲ್ಲಿಸಿದ ಕಾರ್ಯಗಳು ಇಂದಿಗೂ ಜೀವಂತವಾಗಿರುವುದು ಹೆಮ್ಮೆಯ ಸಂಗತಿಯಾಗಿದೆ.



ಮಂಡ್ಯದಲ್ಲಿ ನಡೆಯಲಿರುವ 87ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿರುವುದು ಅತ್ಯಂತ ಅರ್ಥಪೂರ್ಣವಾಗಿದೆ ಎಂದರು. ಉಪನ್ಯಾಸ ನೀಡಿದ ಶಿಕ್ಷಕ ಎಂ.ಕೆ. ಲಮಾಣಿ, ಗೋ.ರು. ಚನಬಸಪ್ಪ ಅವರು ಕ್ನನಡ ಹೆಮ್ಮೆಯಾಗಿದ್ದು, ಸಾಹಿತ್ಯ ಪರಿಷತ್ತಿಗೆ ಜೀವಕಳೆ ನೀಡುವ ಕಾರ್ಯ ಮಾಡಿದರು. ಗೋಟಗೋಡಿಯಲ್ಲಿನ ಜಾನಪದ ವಿಶ್ವವಿದ್ಯಾಲಯ ಸ್ಥಾಪನಾ ಕಾರ್ಯದಲ್ಲಿ ಗೋ.ರು.ಚನಬಸಪ್ಪ ಅವರು ಮಹತ್ತರ ಪಾತ್ರವಹಿಸಿದ್ದರು ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎ. ಬಳಿಗೇರ ಮಾತನಾಡಿ, ಗೋ.ರು. ಚನಬಸಪ್ಪ ಅವರು ಕನ್ನಡ ಸಾಹಿತ್ಯ ಪರಿಷತ್ತಿನ ಜತೆಗೆ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸಲ್ಲಿಸಿದ ಸೇವೆ ಅಮೋಘವಾದುದು ಎಂದು ಹೇಳಿದರು. ತಾಲೂಕಾ ಶಸಾಪ ಅಧ್ಯಕ್ಷ ಎಲ್.ಎಸ್. ಅರಳಹಳ್ಳಿ ಪ್ರಾಸ್ತಾವಿಕ ನುಡಿದರು.

ಪುರಸಭೆ ಸದಸ್ಯೆ ಅಶ್ವಿನಿ ಅಂಕಲಕೋಟಿ, ಬಸಣ್ಣ ಬೆಂಡಿಗೇರಿ, ಡಾ. ಎಸ್.ಜಿ. ಹೂವಿನ, ನಿರ್ಮಲಾ ಅರಳಿ, ಕರಿಯಪ್ಪ ಶಿರಹಟ್ಟಿ, ಜಿ.ಎಸ್. ರಾಮಶೆಟ್ಟರ, ರೇಖಾ ವಡಕಣ್ಣವರ, ಎಂ.ಎನ್. ಗೊರವರ, ಪ್ರತಿಮಾ ಮಹಾಜನಶೆಟ್ಟರ, ಅನ್ನಪೂರ್ಣ ಓದುನವರ ಸೇರಿ ಶರಣ ಸಾಹಿತ್ಯ ಪರಿಷತ್ತಿನ ಸದಸ್ಯರು ಇದ್ದರು.

---

# 'ನೃತ್ಯ ಸಂಭ್ರಮ' ಕಾರ್ಯಕ್ರಮ ನಾಳೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಭವಾನಿ ಭರತನಾಟ್ಯ ಹಾಗೂ ವಿವಿಧೋದ್ದೇಶಗಳ ಸಂಸ್ಥೆಯ ವೇದಿಕಾ ನೃತ್ಯ ಶಾಲೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನ.30ರಂದು ಸಂಜೆ 4-30ಕ್ಕೆ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಸಮುದಾಯ ಭವನದಲ್ಲಿ ನೃತ್ಯ ಸಂಭ್ರಮ-2024 ನಡೆಯಲಿದೆ.

ಸಂಸ್ಥೆಯ ಅಧ್ಯಕ್ಷ ಮಹಾದೇವಪ್ಪ ಚಕ್ರಸಾಲಿ ಅಧ್ಯಕ್ಷತೆ ವಹಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರ ವೀರಯ್ಯಸ್ವಾಮಿ ಬಿ ಉದ್ಘಾಟಿಸುವರು. ಅತಿಥಿಗಳಾಗಿ ಶಾಸಕ ಡಾ. ಚಂದ್ರು ಲಮಾಣಿ, ಸಿಪಿಐ ನಾಗರಾಜ ಮಾಡಳ್ಳಿ, ಗದಗ ರೈಲ್ವೆ ಇಲಾಖೆ ಶಶಿಧರ ರೊಳ್ಳಿ, ಸುನೀಲ ಮಹಾಂತಶೆಟ್ಟರ, ಧಾರವಾಡ ಕೃಷಿ ವಿ.ವಿ ನಾಮ ನಿರ್ದೇಶಕ ಸದಸ್ಯ ಬಸವರಾಜ ಕುಂದಗೋಳಮಠ ಆಗಮಿಸುವರು.

ವೇದಿಕಾ ನೃತ್ಯ ಶಾಲೆಯ ಶಿಕ್ಷಕಿ ವಿದೂಷಿ ಡಾ. ಹೇಮಾ ವಾಘಮೋಡೆ, ನಿವೃತ್ತ ಶಿಕ್ಷಕ ಐ.ಸಿ. ಹತ್ತಿಕಾಳ ಅವರಿಗೆ ಗುರುವಂದನೆ ನಡೆಯಲಿದೆ. ನೃತ್ಯ ಶಾಲೆ ಶಿಕ್ಷಕಿ ನಯನಾ ದಳವಾಯಿ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು 30 ನಿಮಿಷಗಳ ಅವಧಿಯ ಕನ್ನಡ ನಾಡು-ನುಡಿ, ಪರಂಪರೆಯ ವೈಭವವನ್ನು ಸಾರುವ ಕರ್ನಾಟಕ ವೈಭವ ವಿಶೇಷ ನೃತ್ಯ ಪ್ರಸ್ತುತಪಡಿಸುವರು ಎಂದು ಶಾಲೆಯ ಕಾರ್ಯದರ್ಶಿ ಸರೋಜಾ ಗೌಡರ ತಿಳಿಸಿದ್ದಾರೆ.

---

**ಶ್ರೀ ಶನೈಶ್ಚರಸ್ವಾಮಿ ದೇವಸ್ಥಾನದ ಗೋಪುರ ಕಳಸಾರೋಹಣ ಕಾರ್ಯಕ್ರಮದಲ್ಲಿ ರಂಭಾಪುರಿ ಶ್ರೀಗಳು**

# ಕಷ್ಟಗಳಿಲ್ಲದೆ ಜೀವನ ಮೌಲ್ಯ ತಿಳಿಯದು

■ವಿಜಯಸಾಕ್ಷಿ ಸುದ್ದಿ, ಬ್ಯಾಡಗಿ

ಕಷ್ಟಗಳು ಹೇಗೆ ಬದುಕಬೇಕೆಂಬುದನ್ನು ಕಲಿಸುತ್ತದೆ. ನಷ್ಟ ಯಾರನ್ನು ನಂಬಬೇಕೆಂಬುದನ್ನು ಕಲಿಸುತ್ತದೆ. ಕಷ್ಟಗಳು ಎದುರಾಗದಿದ್ದರೆ ಜೀವನದ ಮೌಲ್ಯ ಏನೆಂದು ತಿಳಿಯದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ನಗರದ ಶ್ರೀ ಶನೈಶ್ಚರಸ್ವಾಮಿ ದೇವಸ್ಥಾನದ ಗೋಪುರ ಕಳಸಾರೋಹಣ ಹಾಗೂ 6ನೇ ವರ್ಷದ ಕಾರ್ತೀಕ ದೀಪೋತ್ಸವ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ನಂಬಿಕೆ, ಸ್ನೇಹ, ವಾತ್ಸಲ್ಯ, ವಿಶ್ವಾಸ ಇವು ಮಾನವ ಜೀವನದ ಅತಿ ದೊಡ್ಡ ಆಸ್ತಿ. ಇವುಗಳನ್ನು ಯಾವಾಗಲೂ ಕಳೆದುಕೊಳ್ಳಬಾರದು. ಯಾವಾಗ ಏನಾಗುವುದೋ ಯಾರಿಗೂ ಗೊತ್ತಿಲ್ಲ. ಏನನ್ನೂ ನಾವು ತೆಗೆದುಕೊಂಡು ಹೋಗುವುದಿಲ್ಲ. ಬದುಕಿರುವಷ್ಟು ದಿನ ಒಳ್ಳೆಯವರ ಸ್ನೇಹ ಸಂಬಂಧವನ್ನು ಉಳಿಸಿಕೊಳ್ಳಬೇಕು. ಗಳಿಸಿದ




ಸಂಪತ್ತು, ಪಡೆದ ಅಧಿಕಾರ, ಏರಿದ ಅಂತಸ್ತು, ಸಂತಸ ಸಂಭ್ರಮ ಎಲ್ಲವೂ ಸ್ಥಿರವಲ್ಲ. ಮಾಡಿದ ಸತ್ಕಾರ್ಯ ಗಳಿಸಿಕೊಂಡ ಅನುಭವ ಶಾಶ್ವತ. ದೇವರು ಮತ್ತು ಧರ್ಮದಲ್ಲಿ ನಂಬಿಕೆಯನ್ನಿಟ್ಟು ಬಾಳಬೇಕು. ಶನಿ ದೇವರಿಗೆ ಹೆದರದೇ ಇರುವವರು ಯಾರೂ ಇಲ್ಲ. ರಾಮೇಶ್ವರಕ್ಕೆ ಹೋದರೂ ಶನೀಶ್ವರ ಬಿಡುವುದಿಲ್ಲ ಎಂಬ ನಾಣ್ಣುಡಿಯಿದೆ. ಶನಿ ಪೂಜೆ ಆರಾಧನೆಯಿಂದ ಆತನ ಕೃಪೆಗೆ ಪಾತ್ರರಾಗಬೇಕಾಗುತ್ತದೆ. ಶ್ರೀ ಶನೇಶ್ವರಸ್ವಾಮಿ ಟ್ರಸ್ಟ್ ಪ್ರತಿ ವರುಷ ಒಳ್ಳೆಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಸಂತೋಷದ ಸಂಗತಿ ಎಂದರು.

ಮಡ್ಲೂರು ಮುರುಘಾಮಠದ ಮುರುಘರಾಜೇಂದ್ರ ಸ್ವಾಮಿಗಳು ಉಪಸ್ಥಿತರಿದ್ದರು. ಶ್ರೀ ಶನೇಶ್ವರಸ್ವಾಮಿ ಟ್ರಸ್ಟ್ ಅಧ್ಯಕ್ಷ ಚಂದ್ರಪ್ಪ ಕಾರಗಿ ಅಧ್ಯಕ್ಷತೆ ವಹಿಸಿದ್ದರು. ಡಾ.ಪ್ರೇಮಾನಂದ ತಿ.ಲಕ್ಕಣ್ಣನವರ ಉಪನ್ಯಾಸ ನೀಡಿದರು. ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಎಸ್.ಆರ್. ಪಾಟೀಲ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಸಮಾರಂಭದಲ್ಲಿ ಮಾಜಿ ಶಾಸಕ ಸುರೇಶಗೌಡ್ರ ಪಾಟೀಲ, ಮೋಟೆಬೆನ್ನೂರಿನ ಪುಟ್ಟನಗೌಡ ಪಾಟೀಲ, ಚಿಕ್ಕನಾಯಕನಹಳ್ಳಿ ಹಿರಿಯ ದಿವಾನಿ ನ್ಯಾಯಾಧೀಶ ಸತೀಶ ಎಸ್.ಟಿ., ಉಪವಲಯ ಅರಣ್ಯಾಧಿಕಾರಿ ಡಾ.ಜಗದೀಶ ಎಸ್.ಮಹಾರಾಜಪೇಟೆ, ಬ್ಯಾಡಗಿಯ ಇಂದುಧರಯ್ಯ ಎಂ.ಹಿರೇಮಠ, ಪ್ರಕಾಶ ಬನ್ನಿಹಟ್ಟಿ, ಚಿಕ್ಕಪ್ಪ ಹಾದಿಮನಿ, ಎಂ.ಡಿ. ಚಿಕ್ಕಣ್ಣನವರ, ಕೆ.ಜಿ. ಕುಲಕರ್ಣಿ, ಸಾಯಿಬಾಬಾ ಮಂದಿರ ಧರ್ಮದರ್ಶಿ ಮಂಜಯ್ಯ ಶಾಸ್ತ್ರಿ ಪಾಲ್ಗೊಂಡಿದ್ದರು. ಹಲವಾರು ಗಣ್ಯರಿಗೆ ಹಾಗೂ ಸೇವಾ ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

> ಸಮಾರಂಭದ ನೇತೃತ್ವವನ್ನು ದುಗ್ಲಿ-ಕಡೇನಂದಿಹಳ್ಳಿ ಕ್ಷೇತ್ರದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ವಹಿಸಿ ಮಾತನಾಡಿ, ಅಶಾಂತಿಯಿಂದ ತತ್ತರಿಸುತ್ತಿರುವ ಜೀವ ಜಗತ್ತಿಗೆ ಧರ್ಮವೊಂದೇ ಆಶಾಕಿರಣ. ಧರ್ಮದ ಆದರ್ಶ ಮೌಲ್ಯಗಳನ್ನು ಬೆಳೆಸುವ, ಉಳಿಸಿಕೊಂಡು ಬರುವ ಭಾವನೆ ಎಲ್ಲರಲ್ಲಿ ಬೆಳೆದು ಬರಬೇಕಾಗಿದೆ ಎಂದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಗೆ ಬರುವ 2022-23ನೇ ಸಾಲಿನ ವಾಜಪೇಯಿ ನಗರ ವಸತಿ ಯೋಜನೆಯ ಸಾಮಾನ್ಯ-329, ಅಲ್ಪಸಂಖ್ಯಾತರು-50 ಮತ್ತು ಡಾ. ಬಿ ಆರ್ ಅಂಬೇಡ್ಕರ್ ನಿವಾಸ ಯೋಜನೆಯ ಪರಿಶಿಷ್ಟ ಜಾತಿ -86 ಮತ್ತು ಪರಿಶಿಷ್ಟ ಪಂಗಡ 35 ಒಟ್ಟು 500 ಹೆಚ್ಚುವರಿ ಗುರಿ ಮನೆಗಳಿಗೆ ನಿಗದಿಪಡಿಸಲಾಗಿದೆ.

ಫಲಾನುಭವಿಗಳ ಆಯ್ಕೆಗಾಗಿ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಲು ಡಿಸೆಂಬರ್ 13 ಕೊನೆಯ ದಿನವಾಗಿದ್ದು, ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

**ಬೇಕಾಗಿರುವ ದಾಖಲಾತಿಗಳು**

ನಿಗದಿತ ನಮೂನೆ ಅರ್ಜಿ, ಸ್ವಂತ ಖಾಲಿ ನಿವೇಶನಕ್ಕೆ ಸಂಬಂದಿಸಿದಂತೆ ಹಕ್ಕು ಪತ್ರ/ ಕ್ರಯ ಪತ್ರ/ದಾನಪತ್ರ/ ಉಡುಗೊರೆ ಪತ್ರ/ಖಾತಾ ಪತ್ರಗಳನ್ನು ಹೊಂದಿರಬೇಕು (ಫಾರ್ಮ್ ನಂ 3 ಚಾಲ್ತಿಯಲ್ಲಿ ಇರುವ), ರೇಶನ್ ಕಾರ್ಡ್ (ಬಿ.ಪಿ.ಎಲ್), ಚುನಾವಣೆ ಗುರುತಿನ ಚೀಟಿ, ಜಾತಿ ಮತ್ತು ಆದಾಯ ( ಚಾಲ್ತಿಯಲ್ಲಿರುವ), 2 ಪಾಸ್ ಪೋರ್ಟ್ ಸೈಜ್ ಫೋಟೊ , ಬ್ಯಾಂಕ್ ಪಾಸ್ ಬುಕ್ ಪ್ರತಿ (ಚಾಲ್ತಿಯಲ್ಲಿರುವ), ಆಧಾರ್ ಕಾರ್ಡ್.

**ಗದಗ ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟ ಉದ್ಘಾಟಿಸಿದ ನ್ಯಾ.ಮೂ ಬಸವರಾಜ ಅಭಿಮತ**

# ಕ್ರೀಡೆಗಳು ಸದೃಢ ಆರೋಗ್ಯಕ್ಕೆ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಸದೃಢವಾದ ಆರೋಗ್ಯವಿದ್ದರೆ ಸದೃಢವಾದ ಮನಸ್ಸು ಇರುತ್ತದೆ. ಆರೋಗ್ಯಕರ ದೇಹದಲ್ಲಿ ಆರೋಗ್ಯಕರ ಮೆದುಳು ಅಭಿವೃದ್ಧಿ ಹೊಂದುತ್ತದೆ. ಕ್ರೀಡೆಗಳು ಸದೃಢ ಆರೋಗ್ಯ ಹೊಂದಲು ಸಹಕಾರಿಯಾಗುವುದಲ್ಲದೇ ಜೀವನದಲ್ಲಿ ಯಶಸ್ಸು ಗಳಿಸಲು ಸಹಾಯ ಮಾಡುತ್ತದೆ ಎಂದು ಪ್ರಧಾನ ಹಾಗೂ ಜಿಲ್ಲಾ ಸತ್ರ ನ್ಯಾಯಾಧೀಶರಾದ ಬಸವರಾಜ ಹೇಳಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಗದಗ ಜಿಲ್ಲಾ ಪೊಲೀಸ್ ಇಲಾಖೆಯಿಂದ ಹಮ್ಮಿಕೊಂಡ ವಾರ್ಷಿಕ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಕ್ರೀಡೆಗಳು ಹಾಗೂ ದೈಹಿಕ ಚಟವಟಿಕೆಗಳಿಂದ ವ್ಯಕ್ತಿತ್ವ ವಿಕಸನಗೊಳ್ಳುತ್ತದೆ. ಆತ್ಮವಿಶ್ವಾಸ ಅಭಿವೃದ್ಧಿಯಾಗುತ್ತದೆ. ಮಾನಸಿಕ ಸಮತೋಲನ ಕಾಪಾಡಿಕೊಳ್ಳಲು ಸಹಕಾರಿಯಾಗುತ್ತದೆ. ಇತ್ತೀಚೆಗೆ ಶಾಲಾ-ಕಾಲೇಜುಗಳಲ್ಲಿ ವ್ಯಾಯಾಮ, ಯೋಗಾಸನವನ್ನು ಪಠ್ಯಕ್ರಮವನ್ನಾಗಿ ರೂಢಿಸಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಪೊಲೀಸರು ಇತರೆ ಪ್ರಕರಣಗಳನ್ನು ತನಿಖೆ ಮಾಡಿ ನ್ಯಾಯಾಲಯದಲ್ಲಿ ಸಾಕ್ಷಿದಾರ




ಸರಿಯಾಗಿ ಸಾಕ್ಷ್ಯ ಹೇಳದ ಕಾರಣ ಪ್ರಕರಣ ಬಿದ್ದು ಹೋಗುವ ಸಂದರ್ಭವಿರುತ್ತದೆ. ಅಂತಹ ಸಮಯದಲ್ಲಿ ಪ್ರಕರಣಗಳನ್ನು ಕೂಡ ಕ್ರೀಡಾ ಮನೋಭಾವನೆಯಿಂದ ಸ್ವೀಕರಿಸಬೇಕು. ಪ್ರತಿಯೊಬ್ಬ ನಾಗರಿಕರೂ ಆರೋಗ್ಯವನ್ನು ಸದೃಢವಾಗಿಟ್ಟುಕೊಳ್ಳಲು ದೈಹಿಕ ಚಟುವಟಿಕೆಗಳು ಬಹಳ ಮುಖ್ಯವಾಗಿದೆ. ಕ್ರೀಡೆಗಳ ಮಹತ್ವ ಮನಗಂಡು 2012ರಿಂದ ರಾಷ್ಟ್ರೀಯ ಕ್ರೀಡಾ ದಿನವನ್ನಾಗಿ ಆಚರಿಸಿಕೊಂಡು ಬರಲಾಗುತ್ತಿದೆ ಎಂದು ಹೇಳಿದರು. ಮೂರು ದಿನಗಳ ಕಾಲ ನಡೆಯುವ ಕ್ರೀಡಾಕೂಟದಲ್ಲಿ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿ ಕ್ರೀಡಾಕೂಟವನ್ನು ಯಶಸ್ವಿಗೊಳಿಸಿ ಎಂದು ಅವರು ಶುಭ ಹಾರೈಸಿದರು. ಗದಗ ಶಹರ ಹಾಗೂ ವಿಶೇಷ ಘಟಕ, ಗದಗ ಗ್ರಾಮೀಣ ಹಾಗೂ ಮುಳಗುಂದ, ರೋಣ ವೃತ್ತ, ಡಿಎಆರ್ ವೃತ್ತ, ಶಿರಹಟ್ಟಿ ವೃತ್ತ, ಬೆಟಗೇರಿ ವೃತ್ತ, ನರಗುಂದ-ಮುಂಡರಗಿ ವೃತ್ತ ಸೇರಿ 7 ತಂಡಗಳ ಕ್ರೀಡಾಪಟುಗಳು ಪಾಲ್ಗೊಂಡಿದ್ದರು.

ಸಾಮಾಜಿಕ ಮೌಲ್ಯಗಳು ಕುಸಿಯುತ್ತಿರುವ ಈ ಸಮಯದಲ್ಲಿ ಪೊಲೀಸ್ ಇಲಾಖೆಯ ಕೆಲಸ ಒತ್ತಡದಿಂದ ಕೂಡಿರುತ್ತದೆ ಮತ್ತು ಕಠಿಣವಾಗಿರುತ್ತದೆ. ಪೊಲೀಸ್ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಸದಾ ಒತ್ತಡದಲ್ಲಿ ಕೆಲಸ ಮಾಡುತ್ತಿದ್ದಾರೆ. ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಕ್ರೀಡೆಗಳ ಜೊತೆಗೆ ದೈಹಿಕ ಚಟುವಟಿಕೆಗಳಲ್ಲಿ ಸದಾ ತೊಡಗಿಕೊಳ್ಳುವ ಮೂಲಕ ದೈಹಿಕವಾಗಿ ಹಾಗೂ ಮಾನಸಿಕವಾಗಿ ಸದೃಢರಾಗಿರಬೇಕು ಎಂದು ನ್ಯಾಯಮೂರ್ತಿ ಬಸವರಾಜ ಹೇಳಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಡಿವೈಎಸ್ಪಿಗಳಾದ ವಿದ್ಯಾನಂದ ನಾಯಕ, ಪ್ರಭುಗೌಡ ಪಾಟೀಲ ಸೇರಿ ಜಿಲ್ಲೆಯ ವಿವಿಧ ವೃತ್ತದ ಸಿಪಿಐ, ಪಿಎಸ್ಐ ಹಾಗೂ ಜಿಲ್ಲಾ ಪೊಲೀಸ್ ಕಚೇರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದರು. ಶಂಕರಗೌಡ ಚೌದರಿ ನಿರೂಪಿಸಿದರು.

# ಮಾತೃಭಾಷಾ ಶಿಕ್ಷಣ ಬಲಶಾಲಿಯಾಗಿದೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಆಯಾ ರಾಜ್ಯದ ಭಾಷೆಯಲ್ಲಿ ಒಂದರಿಂದ ಹತ್ತನೆಯ ತರಗತಿಯವರಿಗೆ ಶಿಕ್ಷಣವನ್ನು ಮಕ್ಕಳಿಗೆ ನೀಡುವ ಜರೂರತ್ತಿದೆ. ಹಾಗಾಗಿ ಸಂವಿಧಾನಕ್ಕೆ ತಿದ್ದುಪಡಿ ತರುವ ಅವಶ್ಯಕತೆ ಇದೆಯೆಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸಾಹಿತಿ ಅಲ್ಲಮಪ್ರಭು ಬೆಟ್ಟದೂರು ಅಭಿಪ್ರಾಯಪಟ್ಟರು.

ಸ್ಥಳೀಯ ಸರಕಾರಿ ಪ್ರಥಮದರ್ಜೆ ಮಹಿಳಾ ಪದವಿ ಕಾಲೇಜಿನಲ್ಲಿ ಗುರುವಾರದಂದು ಕಾಲೇಜಿನ ಕನ್ನಡ ವಿಭಾಗ ಆಯೋಜನೆ ಮಾಡಿದ್ದ 'ಕನ್ನಡ ಕ್ರಿಯಾ ವೇದಿಕೆ' ವಿದ್ಯಾರ್ಥಿ ಘಟಕ ಉದ್ಘಾಟನೆ ಮತ್ತು ರಾಜತ್ಯೋತ್ಸವ ಸಮಾರಂಭದಲ್ಲಿ ಅವರು ಮಾತನಾಡಿದರು.



ಮಾತೃಭಾಷೆ ಶಿಕ್ಷಣ ಬಲಶಾಲಿಯಾದದ್ದು. ಅದರಲ್ಲೇ ಮಕ್ಕಳು ಕಲಿತರೆ ವಿಷಯ ಚೆನ್ನಾಗಿ ಅರ್ಥವಾಗುತ್ತದೆ. ಹಾಗಾಗಿ ಎಲ್ಲ ರಾಜ್ಯಗಳು ಈ ದಿಶೆಯಲ್ಲಿ ಆಲೋಚಿಸುವ ಅಗತ್ಯವಿದೆ. ವಿದ್ಯಾರ್ಥಿಗಳು ಕನ್ನಡ ಸಾಹಿತ್ಯವನ್ನು ಮನಸ್ಸಿಟ್ಟು ಓದಬೇಕು. ಓದಿದ್ದು ಮನನವಾದರೆ ಅವರ ಭವಿಷ್ಯ ಚೆನ್ನಾಗಿ ಇರಬಲ್ಲುದು ಎಂದರು.

ಶಿಕ್ಷಣ ಪ್ರೇಮಿ ಬಿ.ಜಿ ಕರಿಗಾರ ಮಾತನಾಡುತ್ತ, ವಿದ್ಯಾರ್ಥಿಗಳು ಕುವೆಂಪು, ಬೇಂದ್ರೆ ಇನ್ನಿತರ ಸಾಹಿತಿಗಳ ಪುಸ್ತಕಗಳನ್ನು ಓದಬೇಕು. ನಮ್ಮ ಹಿರಿಯರ ಪ್ರತಿಫಲವಾಗಿ ಕರ್ನಾಟಕ ರಾಜ್ಯ ಉದಯವವಾಗಿದೆ. ಕನ್ನಡ ಮಾಧ್ಯಮದಲ್ಲಿ ಓದಿದವರು ಉನ್ನತ ಹುದ್ದೆಗಳನ್ನು ಪಡೆದುಕೊಂಡಿದ್ದಾರೆ. ವಿದ್ಯಾರ್ಥಿಗಳು ಪಠ್ಯದ ಜೊತೆ-ಗೆ ಪಠ್ಯತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯ ಡಾ. ಗಣಪತಿ ಲಮಾಣಿ ವಹಿಸಿದ್ದರು. ಕನ್ನಡ ವಿಭಾಗದ ಮುಖ್ಯಸ್ಥೆ ಡಾ. ಹುಲಿಗೆಮ್ಮ ಮಾತನಾಡಿದರು. ವೇದಿಕೆಯಲ್ಲಿ ಕಾಲೇಜಿನ ಉಪನ್ಯಾಸಕರಾದ ಡಾ. ಗವಿಸಿದ್ದಪ್ಪ ಮುತ್ತಾಳ, ಡಾ. ಪ್ರದೀಪ್ ಕುಮಾರ್, ಡಾ. ನರಸಿಂಹ, ಡಾ. ಅಶೋಕ ಕುಮಾರ್, ಸುಮಿತ್ರ, ಶುಭ, ಶಿವ ಪ್ರಸಾದ್ ಹಾದಿಮನಿ, ಡಾ. ಮಂಜಪ್ಪ, ಡಾ. ಸೂರಪ್ಪ, ವಿರೂಪಾಕ್ಷಪ್ಪ, ಮುತ್ತಾಳ ಮುಂತಾದವರಿದ್ದರು.

ಕಾವೇರಿ, ನೇತ್ರ ಮತ್ತು ಸಬಿಹಾ ಪ್ರಾರ್ಥನೆ ಗೀತೆ ಹಾಡಿದರು. ಗೀತಾ ಭಜಂತ್ರಿ ಸ್ವಾಗತಿಸಿದರು. ಭೂಮಿಕಾ ಹೂಗಾರ ನಿರೂಪಣೆ ಮಾಡಿದರು. ಗಂಗಮ್ಮ ವಂದಿಸಿದರು.

# ನೂತನ ಎಸ್.ಡಿ.ಎಮ್.ಸಿ ರಚನೆ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಚಿಕ್ಕಹಂದಿಗೋಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನೂತನ ಎಸ್.ಡಿ.ಎಮ್.ಸಿಯನ್ನು ರಚನೆ ಮಾಡಲಾಯಿತು.

2024-2027ರ ಅವಧಿಗೆ ನೂತನ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮೀತಿಯ ಅಧ್ಯಕ್ಷರಾಗಿ ಪಾರ್ವತಿ ಶರಣಯ್ಯ ಕಾಶಿಮಠ ಮತ್ತು ಉಪಾಧ್ಯಕ್ಷರಾಗಿ, ಸದಸ್ಯರಾಗಿ ಕನಕಪ್ಪ ಪೂಜಾರ, ಮಂಜುಳಾ ಮಾದರ, ಪಕ್ಕೀರಪ್ಪ ಬೋರ್ಜಿ, ಅಲ್ಲಾಭಕ್ಷಿ ದುಂದೂರ, ರಮಜಾನಸಾಬ ಶಲವಡಿ, ಮಮತಾಜ ನದಾಫ, ರುಕ್ಸಾನಬಾನು ಶಲವಡಿ, ಸಂತೋಷ ಕುಂಬಾರ, ಪ್ರವೀಣ ಪೂಜಾರ, ವೀರನಗೌಡ ಗೌಡರ, ಗಿರಿಜಾ ವಿರಕ್ತಮಠ, ವಿಜಯಲಕ್ಷ್ಮಿ ಗುಡ್ಡಿಮಠ, ಶ್ರೀದೇವಿ ವಿರಕ್ತಮಠ, ರೇವತಿ ಪತ್ತಾರ, ಪ್ರಭಾವತಿ ಆಲೂರ ಇವರನ್ನು ಆಯ್ಕೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಹಿಂದಿನ ಎಸ್.ಡಿ.ಎಮ್.ಸಿ ಸದಸ್ಯರಿಗೆ ಬೀಳ್ಕೊಡಲಾಯಿತು. ಶಾಲೆಯ ಮುಖ್ಯೋಪಾಧ್ಯಾಯೆ ಪದ್ಮಾವತಿ ಹುಚ್ಚಣ್ಣವರ ಸೇರಿದಂತೆ ಶಾಲಾ ಶಿಕ್ಷಕರು, ವಿಧ್ಯಾರ್ಥಿಗಳು ಹಾಗೂ ಗ್ರಾಮದ ಗುರುಹಿರಿಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಯೋಗಿರಾಜರ ಆರಾಧನಾ ಮಹೋತ್ಸವ ಇಂದಿನಿಂದ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಲಕ್ಕುಂಡಿ ಗ್ರಾಮದ ಪವಾಡ ಪುರುಷ, ಇಚ್ಛಾಮರಣಿ ಯೋಗಿರಾಜ ಮಹಾರಾಜರ 103ನೇ ಆರಾಧನಾ ಮಹೋತ್ಸವವು ನ.29ರಿಂದ ಮೂರು ದಿನಗಳ ಕಾಲ ಧಾರ್ಮಿಕ ವಿಧಿ ವಿದಾನಗಳೊಂದಿಗೆ ಜರುಗುವುದು.

ಕಾರ್ಯಕ್ರಮವನ್ನು ಯೋಗಿರಾಜ ಭಕ್ತಿ ಮಂಡಳಿಯ ಆಶ್ರಯದಲ್ಲಿ ಶಂಕರ ದೇವಸ್ಥಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ನ.29ರಂದು ಬೆಳಿಗ್ಗೆ 5.30ರಿಂದ ಸಂಜೆ 9 ಗಂಟೆಯವರೆಗೆ ಜರುಗುವ



ಧಾರ್ಮಿಕ ಕಾರ್ಯಗಳಲ್ಲಿ ಸದ್ಗುರುಗಳ ಪಾದುಕೆ ಸ್ಥಾಪನೆ, ವಿದ್ಯಾಶಂಕರ ದೇವರಿಗೆ ಲಘು ರುದ್ರಾಭಿಷೇಕ, ಗಣಪತಿ ಸಹಸ್ರ ಮೋದಕ ಹೋಮ, ಮಹಾ ಮಂಗಳಾರತಿ, ಮಹಾ ಪ್ರಸಾದ, ದೀಪೋತ್ಸವ, ಶೇಜಾರತಿ ಮಂತ್ರಪುಷ್ಪ ಹಾಗೂ ಅಷ್ಟಾವಧಾನ ಸೇವೆ ನಡೆಯುವುದು.

ಮುಂಜಾನೆ 10.30ರಿಂದ ಸಂಜೆ 7.30ರವರೆಗೆ ವೇದಿಕೆ ಕಾರ್ಯಕ್ರಮದಲ್ಲಿ ಹುಬ್ಬಳ್ಳಿಯ ವಿಭಾವರಿ ಭಜನಾ ಮಂಡಳಿಯಿಂದ ಭಜನೆ, ಸೋತ್ರ ಪಠಣ, ಬೆಂಗಳೂರು ಗೌರಿ ಅರುಣ ಕುಲಕರ್ಣಿ ಅವರಿಂದ ಭಕ್ತಿ ಸಂಗೀತ, ಧಾರವಾಡ ತಾರಕೇಶ್ವರ ಭಜನಾ ಮಂಡಳಿಯಿಂದ ಭಕ್ತಿ ಭಜನೆ, ಗುರುವಿನಹಳ್ಳಿಯ ವಿಶ್ವನಾಥರಾವ್ ಕುಲಕರ್ಣಿ ಅವರಿಂದ ಗಮಕ ವಾಚನ, ಕುರ್ತುಕೋಟಿಯ ಕೀರ್ತನ ಕೇಸರಿ ದಿಗಂಬರಶಾಸ್ತ್ರಿ ಅವರಿಂದ ಕೀರ್ತನೆ ನಡೆಯಲಿದೆ.

ನ.30ರಂದು ಬೆಳಿಗ್ಗೆ ಕಾಕಡಾರತಿ, ಮಧ್ಯಾಹ್ನ 12ಕ್ಕೆ ಅಲಂಕಾರ ಪೂಜೆ, ಮುಂಜಾನೆ 9ರಿಂದ ಸಂಜೆ 9ರವರೆಗೆ ವೇದಿಕೆ ಕಾರ್ಯಕ್ರಮಗಳು, ಗದಗ ಕರಿ ಭಜನಾ ಮಂಡಳ, ಹುಬ್ಬಳ್ಳಿ ಶಾರಾದಾ ಮಹಿಳಾ ಕುಂಜ ಹಾಗೂ ಹಳೆ ಹುಬ್ಬಳ್ಳಿಯ ಶಂಕರ ಭಜನಾ ಮಂಡಳಿಯಿಂದ ಭಜನಾ ಕಾರ್ಯಕ್ರಮ, ಹುಬ್ಬಳ್ಳಿಯ ಅರ್ಪಿತಾ ಜಹಗೀರದಾರ ಹಾಗೂ ಶ್ರೀಕಾಂತ ಹೂಲಿ ಸಂಗಡಿಗರಿಂದ ಭಕ್ತಿ ಸಂಗೀತ ನಡೆಯುವುದು.

ಡಿ.1ರಂದು ಬೆಳಿಗ್ಗೆ 5.30ರಿಂದ ಮಧ್ಯಾಹ್ನ 1.30ರವರೆಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು, ನಂತರ ಸತ್ಯನಾರಾಯಣ ಪೂಜಾ ನೆರವೇರುವುದು. ಗದಗ ಮಹಾಲಕ್ಷ್ಮೀ ಭಜನಾ ಮಂಡಳಿಯಿಂದ ಭಾಗ್ಯಶ್ರೀ ಫಳಗಿ ಅವರು ರಚಿಸಿದ ದಾಸಶ್ರೇಷ್ಠ ಪರಂದರ ದಾಸರು ನಾಟಕ ಪ್ರದರ್ಶನ, ನಂತರ ಕೋಲಾಟ, ಭಜನೆ, ಮಧ್ಯಾಹ್ನ ನರೆಗಲ್ಲದ ವೆಂಕಟೇಶ ಕುಲಕರ್ಣಿ ಅವರಿಂದ ಭಕ್ತಿ ಸಂಗೀತ, ಧಾರವಾಡದ ಉಮೇಶ ಪಾಟೀಲ, ಮೋಹನ ಮಾಗಡಗೇರಿ ಅವರಿಂದ ಸಂಗೀತ ಸೇವೆ ನಡೆಯುವುದು ಎಂದು ಭಕ್ತ ಮಂಡಳಿಯ ಪ್ರಕಟಣೆ ತಿಳಿಸಿದೆ.

# ಕರಾಟೆ ಸ್ಪರ್ಧೆಯಲ್ಲಿ ಪೃಥ್ವಿ ಪಡಗದ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

ತುಮಕೂರಿನ ಲಾಯನ್ ಮಾರ್ಷಲ್ ಆರ್ಟ್ಸ್ ಅಸೋಸಿಯೇಶನ್ ವತಿಯಿಂದ್ದಿತ್ತೀಚೆಗೆ ಆಯೋಜಿಸಿದ್ದ ರಾಷ್ಟ್ರಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಗದುಗಿನ ರಾಯಲ್ ಯುಥ್ ಮಾರ್ಷಲ್ ಆರ್ಟ್ಸ್ ಅಸೋಸಿಯೇಶನ್ ಸಂಸ್ಥೆಯಲ್ಲಿ ಕರಾಟೆ ತರಬೇತಿ ಪಡೆದ ವಿದ್ಯಾರ್ಥಿ ಪೃಥ್ವಿ ಕೆ.ಪಡಗದ ಕರಾಟೆ ಸ್ಪರ್ಧೆಯ ಕಟಾ ಮತ್ತು ಕುಮಟೆ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ಈ ವಿದ್ಯಾರ್ಥಿಗೆ, ತರಬೇತಿ ನೀಡಿದ ಮುಖ್ಯ ತರಬೇತುದಾರ ಮೆಹಬೂಬ ದೊಡ್ಡಮನಿ ಮತ್ತು ರಾಯಸಾಬ ಹುಯಿಲಗೋಳ ಅವರಿಗೆ ಎಲ್ಲ ಪಾಲಕರು, ಗುರು-ಹಿರಿಯರು ಅಭಿನಂದಿಸಿದ್ದಾರೆ.

# ಅಗಡಿ ಕಾಲೇಜಿನಲ್ಲಿ ಕನ್ನಡ ಹಬ್ಬ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಮಹಾವಿದ್ಯಾಲಯ ಹಾಗೂ ಪದವಿಪೂರ್ವ ಕಾಲೇಜಿನಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಹಮ್ಮಿಕೊಂಡಿರುವ 10ನೇ ವರ್ಷದ 'ಅಗಡಿ ಕನ್ನಡ ಹಬ್ಬ ಸಂಭ್ರಮ' ಕಾರ್ಯಕ್ರಮದಲ್ಲಿ ಗುರುವಾರ ವಿದ್ಯಾರ್ಥಿಗಳಿಂದ ಸಮೂಹ ನೃತ್ಯ ಸಂಭ್ರಮ ನೆರವೇರಿತು.

ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ, ಶಿರಹಟ್ಟಿ ರಾಣಿ ಚನ್ನಮ್ಮ ವಸತಿ ಶಾಲೆಯ ಪ್ರಾಚಾರ್ಯ ನಾಗರಾಜ ಕಳಸಾಪುರ ನೃತ್ಯ ಸಂಭ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಕಾಲೇಜಿನ ಆವರಣದಲ್ಲಿ ಕನ್ನಡ ಜನಪದ ಸಂಪ್ರದಾಯದ ಉಡುಗೆ ತೊಟ್ಟ ವಿದ್ಯಾರ್ಥಿ-ವಿದ್ಯಾರ್ಥಿನಿಯರ



ಸಂಭ್ರಮ ಮನೆ ಮಾಡಿತ್ತು. ಇಂಜಿನಿಯರಿಂಗ್ ಹಾಗೂ ಪದವಿಪೂರ್ವ ಕಾಲೇಜಿನ 80 ವಿದ್ಯಾರ್ಥಿಗಳ ತಂಡ 30 ನಿಮಿಷಗಳ ಕಾಲ ಕನ್ನಡ ಹಾಡಿಗೆ ನೃತ್ಯ ಮಾಡುವ ಮೂಲಕ ಎಲ್ಲರ ಗಮನ ಸೆಳೆದರು.

ಈ ಸಂದರ್ಭದಲ್ಲಿ ಅಗಡಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ, ಪ.ಪೂ ಕಾಲೇಜಿನ ಪ್ರಾಚಾರ್ಯ ಡಾ. ಎನ್. ಹಯವದನ, ಮುಖ್ಯ ಆಡಳಿತ ಅಧಿಕಾರಿ ಪ್ರೊ.ವಿಕ್ರಮ ಶಿರೋಳ, ಕಾರ್ಯಕ್ರಮ ಸಂಯೋಜಕ ಪ್ರೊ. ಸೋಮಶೇಖರ ಕೆರಿಮನಿ, ಸಮೂಹ ನೃತ್ಯ ಉಸ್ತುವಾರಿ ಪ್ರೊ. ಬಸವರಾಜ ಸೊರಟೂರ, ಪ್ರೊ. ರಾಜೇಶ್ವರಿ ಗಾಮನಗಟ್ಟಿ, ಡಾ. ಆರ್.ಎಮ್. ಪಾಟೀಲ್, ರವಿಪ್ರಕಾಶ ಸೇರಿ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿಗಳು, ವಿದ್ಯಾರ್ಥಿಗಳಿದ್ದರು.

# ದುಡಿಮೆಯ ಕೊಂಚ ಹಣವನ್ನು ದಾನ ಮಾಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತ್ರಿವಿಧ ದಾಸೋಹ ಸೇವೆಯಲ್ಲಿ ಮಠಮಾನ್ಯಗಳ ಪಾತ್ರ ಅಗ್ರಗಣ್ಯವಾಗಿದೆ. ತುಲಾಭಾರ ಸೇವೆಯಿಂದ ಬರುವ ಹಣವನ್ನು ಬಡ ಮಕ್ಕಳ ಶಿಕ್ಷಣಕ್ಕಾಗಿ ವಿನಯೋಗಿಸಲಾಗುತ್ತಿದೆ ಎಂದು ಕಾಶಿ ಪೀಠದ ಜಗದ್ಗುರು ಡಾ.ಚಂದ್ರಶೇಖರ ಶಿವಾಚಾರ್ಯ ಭಗವತ್ಪಾಂದಗಳವರು ನುಡಿದರು.

ಅವರು ಗುರುವಾರ ಪಟ್ಟಣದ ವಿದ್ಯಾರಣ್ಯ ವೃತ್ತದ ಹತ್ತಿರ ಲಿಂ.ಶ್ರೀ ರುದ್ರಯ್ಯ ಹಿರೇಮಠ ಇವರ ಸ್ಮರಣಾರ್ಥವಾಗಿ ತುಲಾಭಾರ ಹಾಗೂ ಪಾದಪೂಜಾ ಕಾರ್ಯಕ್ರಮದಲ್ಲಿ ನೀಡಿದ ತುಲಾಭಾರ ಸೇವೆಯನ್ನು ಸ್ವೀಕರಿಸಿ ಆಶೀರ್ವಚನ ನೀಡಿ ಮಾತನಾಡಿದರು.

ಕಾಶಿ ಪೀಠ ಸಾಮಾಜಿಕ, ಶೈಕ್ಷಣಿಕ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ಮಾಡುತ್ತಿದೆ. ಭಕ್ತರ ತುಲಾಭಾರ ಸೇವೆಯಿಂದ ಬರುವ ಹಣವನ್ನು ತ್ರಿವಿಧ ದಾಸೋಹದ ಜೊತೆಗೆ ಪ್ರತಿ ತಿಂಗಳು ಸುಮಾರು 500



ವಿದ್ಯಾರ್ಥಿಗಳಿಗೆ 1000 ರೂಗಳಂತೆ ಅರ್ಹ ವಿದ್ಯಾರ್ಥಿಗಳಿಗೆ ಶಿಷ್ಯವೇತನ ನೀಡಲಾಗುತ್ತಿದೆ. ಪ್ರತಿಯೊಬ್ಬರೂ ತಮ್ಮ ದುಡಿಮೆಯ ಕೊಂಚ ಹಣವನ್ನು ಧಾರ್ಮಿಕ, ಶೈಕ್ಷಣಿಕ, ಸಾಮಾಜಿಕ ಕಾರ್ಯಗಳಿಗೆ ನೀಡುವುದರಿಂದ ಅದಕ್ಕೆ ಶ್ರೇಷ್ಠವಾದ ಫಲ ಪ್ರಾಪ್ತಿಯಾಗುತ್ತದೆ ಮತ್ತು ಬದುಕಿನ ಸಾರ್ಥಕತೆಗೆ ಕಾರಣವಾಗುತ್ತದೆ. ಲಿಂ.ರುದ್ರಯ್ಯ ಹಿರೇಮಠ ಅವರ ಸ್ಮರಣಾರ್ಥ ಅವರ ಕುಟುಂಬವರ್ಗದವರು ನೀಡಿದ ತುಲಾಭಾರ ಸೇವೆ ಸದ್ವಿನಿಯೋಗವಾಗುವದರ ಜೊತೆಗೆ ಅವರಿಗೆ ಪುಣ್ಯ ಪ್ರಾಪ್ತಿಯಾಗುತ್ತದೆ ಎಂದು ನುಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ರಾಜೀವ ಕುಂಬಿ, ಶಂಕ್ರಪ್ಪ ಗುರಿಕಾರ, ಶಿವಲೀಲಾ ಹಿರೇಮಠ, ಗಂಗಾಧರ ಹಿರೇಮಠ, ಸುಮಾ ಹಿರೇಮಠ, ಪಂಚಯ್ಯ ಹಿರೇಮಠ, ಚನ್ನಪ್ಪ ಕೋಲಕಾರ, ಮಹೇಶ ಲಿಂಬಯ್ಯ ಸ್ವಾಮಿಮಠ, ಜೆ.ಡಿ. ಲಮಾಣಿ, ಸಂತೋಷ ಬಾಳಿಕಾಯಿ, ಬಿ.ಟಿ. ಪಾಟೀಲ, ಚಂದ್ರು ಹಿರೇಮಠ, ವೀರಣ್ಣ ಪವಾಡದ, ಕುಮಾರ ಕುಂಬಾರ, ಮುರುಘೇಂದ್ರಸ್ವಾಮಿ ಹಿರೇಮಠ ಮುಂತಾದವರಿದ್ದರು. ಶ್ರೀಕಾಂತ ಹಿರೇಮಠ ಕಾರ್ಯಕ್ರಮ ನಿರೂಪಿಸಿದರು.

## ಸರಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಚುನಾವಣೆ ನಾಮಪತ್ರಗಳ ಪರಿಶೀಲನೆ

■ ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳ ಹುದ್ದೆಗೆ ಸಲ್ಲಿಸಿದ್ದ ನಾಮಪತ್ರಗಳ ಪರಿಶೀಲನೆ ಗುರುವಾರ ನಡೆಯಿತು. ಗದಗ ಜಿಲ್ಲಾ ಅಧ್ಯಕ್ಷ ಸ್ಥಾನಕ್ಕೆ ಸಲ್ಲಿಸಿರುವ 2 ನಾಮಪತ್ರಗಳ ಪೈಕಿ ಒಂದು ತಿರಸ್ಕೃತವಾಗಿ, ಇನ್ನೊಂದು ಸಿಂಧುವಾಗಿರುವುದರಿಂದ ಅದನ್ನು ಅಂಗೀಕರಿಸಲಾಗಿದೆ. ರಾಜ್ಯ ಪರಿಷತ್ ಸದಸ್ಯ ಹುದ್ದೆಗೆ ಸಲ್ಲಿಸಲಾಗಿರುವ ನಾಮಪತ್ರವನ್ನು ಅಂಗೀಕರಿಸಲಾಗಿದೆ.

ಅಧ್ಯಕ್ಷ ಸ್ಥಾನಕ್ಕೆ ಒಂದು ನಾಮಪತ್ರ ಸಿಂಧುವಾಗಿರುವುದರಿಂದ ಅಧ್ಯಕ್ಷ ಸ್ಥಾನದ ಅಭ್ಯರ್ಥಿ ರವಿ ಗುಂಜೀಕರ ಅವಿರೋಧವಾಗಿ ಆಯ್ಕೆಯಾಗಿರುವುದಾಗಿ ಘೋಷಿಸಲಾಯಿತು. ರಾಜ್ಯ ಪರಿಷತ್ ಸದಸ್ಯ ಸ್ಥಾನಕ್ಕೆ ಸ್ಪರ್ಧಿಸಿದ ಡಿ.ಟಿ. ವಾಲ್ಮೀಕಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಜಿಲ್ಲಾ ಖಜಾಂಚಿ ಸ್ಥಾನಕ್ಕೆ 2 ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದು, ನ.29ರಂದು ಯಾವುದೇ ಅಭ್ಯರ್ಥಿಗಳು ನಾಮಪತ್ರ ಹಿಂಪಡೆಯದಿದ್ದಲ್ಲಿ ಡಿ.4ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಚುನಾವಣೆ ನಡೆಯಲಿದೆ ಎಂದು ಜಿಲ್ಲಾ ಚುನಾವಣಾ ಅಧಿಕಾರಿ ಎಸ್.ಬಿ. ಚವಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಗರಸಭೆಯ 2025-26ನೇ ಸಾಲಿನ ಅಯವ್ಯಯ ಕುರಿತ ಮೊದಲ ಸುತ್ತಿನ ಸಭೆ

# ಅಭಿವೃದ್ಧಿಗೆ ಆದಾಯದ ಮೂಲಗಳ ಕೊರತೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರಸಭೆಯ 2025-26ನೇ ಸಾಲಿನ ಅಯವ್ಯಯ ಕುರಿತ ಸಾರ್ವಜನಿಕ ಸಮಾಲೋಚನೆಯ ಮೊದಲ ಸುತ್ತಿನ ಸಭೆಯಲ್ಲಿ ಸಾರ್ವಜನಿಕರು, ಸಂಘ-ಸಂಸ್ಥೆಯ ಪ್ರತಿನಿಧಿಗಳು ತಮ್ಮ ಅನಿಸಿಕೆ- ಅಭಿಪ್ರಾಯಗಳನ್ನು ಮಂಡಿಸಿ, ಅವಳಿ ನಗರದ ಅಭಿವೃದ್ಧಿ ಪೂರಕವಾಗಿ ಕೆಲಸ ಮಾಡಬೇಕೆಂದು ಸಲಹೆ ನೀಡಿದರು.

ಇದಕ್ಕೂ ಮುನ್ನ ನಗರಸಭೆಯ ಅಕೌಂಟೆಂಟ್ ಸೂಪರಿಡೆಂಡೆಂಟ್ ಟಿ.ಎಚ್. ದ್ಯಾವನೂರ ಮಾತನಾಡಿ, ನಗರಸಭೆಗೆ ಅದಾಯದ ಮೂಲಗಳ ಕೊರತೆ ಇರುವದರಿಂದ ನಿರೀಕ್ಷಿತ ಅಭಿವೃದ್ಧಿಯಾಗುತ್ತಿಲ್ಲ. ಪ್ರತಿವರ್ಷ ನೀರು, ವಿದ್ಯುತ್ ಹಾಗೂ ಸ್ವಚ್ಛತೆ ನಿರ್ವಹಣೆಗಾಗಿ 16 ಕೋಟಿ ಖರ್ಚಾಗುತ್ತಿದ್ದರೆ, ನಗರಸಭೆಗೆ ಗರಿಷ್ಠ 90 ಲಕ್ಷ ರೂ.ಗಳ ಆದಾಯ ಬರುತ್ತಿದೆ. ನಗರಸಭೆಗೆ ಶೇ.50ರಷ್ಟು ಆಸ್ತಿ ತೆರಿಗೆ ಹಾಗೂ ಶೇ. 93ರಷ್ಟು ನೀರಿನ ಕರ ಬರಬೇಕಾಗಿದೆ ಎಂದು ಕಳೆದ ಸಾಲಿನ ಅಂಕಿ ಅಂಶಗಳನ್ನು ವಿವರಿಸಿದರು.

ಇದಕ್ಕೆ ಉತ್ತರವಾಗಿ ಸಮಾಜಸೇವಕರಾದ ಸತೀಶ ಹೂಲಿ ಮಾತನಾಡಿ, ಕಸ ಸಂಗ್ರಹಣೆಯ ಆದಾಯ ಇತರರಿಗೆ ಹೋಗುತ್ತಿದೆ. ನೀರು ಸರಿಯಾಗಿ ಪೂರೈಕೆ ಆಗದೆ ಮತ್ತು 24*7 ಯೋಜನೆ ಪೂರ್ಣಗೊಳ್ಳದೆ ಇರುವದರಿಂದ ಆದಾಯ ಕಡಿಮೆ ಆಗಿದೆ. 40 ಲಕ್ಷ ರೂ. ಭಿಕ್ಷುಕರ ಕರ ಮೀಸಲಿಟ್ಟರೂ ಭಿಕ್ಷಾಟನೆ ಕಡಿಮೆಯಾಗಿಲ್ಲ. 40 ಲಕ್ಷ ರೂ. ಗ್ರಂಥಾಲಯಕ್ಕೆ ಮೀಸಲಿಟ್ಟರೂ ಅದು ಬಳಕೆಯಾಗಿಲ್ಲ. ದೊಡ್ಡ ವಾಣಿಜ್ಯ ಮಳಿಗೆಗಳಿಂದ ತೆರಿಗೆ ವಸೂಲಿ ಆಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.



ಮುತ್ತು ಬಿಳೆಯಲಿ ಮಾತನಾಡಿ, ನಗರಸಭೆಯ 450ಕ್ಕೂ ಹೆಚ್ಚು ವಾಣಿಜ್ಯ ಮಳಿಗೆಗಳ ಬಾಡಿಗೆ ದರವನ್ನು ಪರಿಷ್ಕರಣೆ ಮಾಡಿ ಬಾಡಿಗೆ ಹೆಚ್ಚಿಸಿದರೆ ಅದರಿಂದ ಬರುವ ಆದಾಯದಿಂದ ಅಭಿವೃದ್ಧಿ ಮಾಡಬಹುದು ಎಂದು ಹೇಳಿದರು.

ಅಶೋಕ ಕುಡತಿನ್ನಿ ಮಾತನಾಡಿ, ಅವಳಿ ನಗರ ಬೃಹತ್ತಾಗಿ ಬೆಳೆಯುತ್ತಿದ್ದರೂ ಅದಾಯದ ಕೊರತೆಯಿಂದ ಅಭಿವೃದ್ಧಿ ಕುಂಠಿತಗೊಂಡಿದೆ. ದುಂದುವೆಚ್ಚಗಳಿಗೆ ಕಡಿವಾಣ ಹಾಕಿ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಆನಂದ ಸಿಂಗಾಡಿ, ಮೋಹನ ಕಟ್ಟಿಮನಿ, ಬಾಬು ನದಾಫ್, ಡಾ. ಪವನ ಪಾಟೀಲ, ಡಾ. ತುಕಾರಾಮ ಸೂರಿ, ಶರಣಪ್ಪ ಗೊಳಗೊಳಕಿ, ಪ್ರಕಾಶ ಕಲ್ಮನಿ, ಮುನ್ನಾ ರೇಶ್ಮಿ, ಮುತ್ತು ಚವಡಣ್ಣವರ ಮುಂತಾದವರು ಸಲಹೆಗಳನ್ನು ನೀಡಿದರು.

ವೇದಿಕೆ ಮೇಲೆ ಪೌರಾಯುಕ್ತರಾದ ಮಹೇಶ ಪೋತದಾರ ಉಪಸ್ಥಿತರಿದ್ದರು. ಕಚೇರಿಯ ವ್ಯವಸ್ಥಾಪಕ ಪರಶುರಾಮ ಶೇರಖಾನೆ, ಎಸ್.ವೈ. ಸಂಕನಗೌಡ್ರ, ಪ್ರಲ್ಹಾದ ಕಮ್ಯೂನಿಅಂತೇರ, ಬಸವರಾಜ ಕೋಳೂರು, ಎಂ.ಎಂ. ಮಕಾನದಾರ, ಎಸ್.ಎನ್. ದಳವಾಯಿ, ಎಸ್.ಎಂ. ಗುಡಿ, ಎಂ.ಆರ್. ಪಾಟೀಲ, ಜಗದೀಶ ಕೋನರೆಡ್ಡಿ ಮುಂತಾದವರು ಪಾಲ್ಗೊಂಡಿದ್ದರು.

ಸಮಾಜಸೇವಕ ಮಾರ್ತಾಂಡಪ್ಪ ಹಾದಿಮನಿ ಮಾತನಾಡಿ, ಸಾರ್ವಜನಿಕರ ಸಮಾಲೋಚನೆ ಸಭೆ ಕಾಟಾಚಾರಕ್ಕೆ ಆಗಬಾರದು. ನಗರಸಭೆಯಲ್ಲಿ 214 ಹುದ್ದೆಗಳು ಖಾಲಿ ಇವೆ. ತೆರಿಗೆ ಸಂಗ್ರಹಿಸಿದಷ್ಟೇ ಸೋರಿಕೆ ಆಗುತ್ತಿದೆ. ನಗರದಲ್ಲಿ ಫ್ಲೆಕ್ಸ್ ಬ್ಯಾನರ್, ಆಸ್ಪತ್ರೆ, ಬೃಹತ್ ಮಳಿಗೆಗಳಿಂದ ತೆರಿಗೆ ಸಂಗ್ರಹಿಸಬೇಕು. ರಾಜ್ಯದಲ್ಲಿಯೇ ಅತಿ ಹೆಚ್ಚು ಆಸ್ತಿ ಹೊಂದಿರುವ ನಗರಸಭೆಯಲ್ಲಿ ಗದಗ 2ನೇ ಸ್ಥಾನದಲ್ಲಿದೆ. ಸುಮಾರು 5 ಸಾವಿರ ಕೋಟಿ ರೂ ಮೌಲ್ಯದ ಆಸ್ತಿ ಹೊಂದಿದ್ದರೂ ಕೇವಲ ಒಂದು ಸಾವಿರ ಕೋಟಿ ಮೌಲ್ಯದ ಆಸ್ತಿಯಿಂದ ತೆರಿಗೆ ಬರುತ್ತಿದೆ. ಈ ಬಗ್ಗೆ ಗಂಭೀರವಾಗಿ ಚಿಂತನೆ ಮಾಡಬೇಕು ಎಂದು ಹೇಳಿದರು.

# ಇಂದಿನಿಂದ ಗದುಗಿನಲ್ಲಿ 'ಸಿಂಹರೂಪಿಣಿ'

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನಲ್ಲಿ ಯಶಸ್ವಿ 25 ದಿನಗಳನ್ನು ಪೂರೈಸಿ ಮುನ್ನುಗ್ಗುತ್ತಿರುವ ಕನ್ನಡ ಚಿತ್ರ ಸಿಂಹರೂಪಿಣಿ ಈಗ ಗದಗ, ಮುಂಡರಗಿ, ಮುಧೋಳದಲ್ಲಿ ಬಿಡುಗಡೆಯಾಗುತ್ತಿದೆ.




ಗದುಗಿನ ಕೃಷ್ಣಾ ಚಿತ್ರಮಂದಿರಕ್ಕೆ (ಮಧ್ಯಾಹ್ನ 12 ಗಂಟೆಗೆ) ಹಾಗೂ ಮುಂಡರಗಿಯ ಚೋಟು ಮಹಾರಾಜ ಶ್ರೀ ಸಿನಿಮಾಸ್ ಚಿತ್ರಮಂದಿರಕ್ಕೆ (ಸಂಜೆ 3 ಗಂಟೆಗೆ) ಚಿತ್ರದ ಕಲಾವಿದರಾದ ನೀನಾಸಂ ಅಶ್ವತ್, ಡಿ.ಕೆ.ಡಿ. ನವಾಜ್, ವಿಜಯ ಚಂಡೂರ, ಸಾಗರ ಲೋಹಿತ್, ಮಲ್ಲಿಕಾರ್ಜುನ, ನಿರ್ದೇಶಕರಾದ ಕಿನ್ನಾಳ ರಾಜ್, ನಿರ್ಮಾಪಕರಾದ ಕೆ.ಎಂ. ನಂಜುಂಡೇಶ್ವರ ಶುಕ್ರವಾರ ಭೇಟಿ ನೀಡಲಿದ್ದಾರೆ.

ಈ ಚಿತ್ರದಲ್ಲಿ ಗದಗ-ಬೆಟಗೇರಿ ಬಾಲಕಲಾವಿದೆ ಸಾಯಿಸಮೀಕ್ಷಾ ಮುಖ್ಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾಳೆ. ಗದಗ ಜಿಲ್ಲೆಯ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಚಿತ್ರವನ್ನು ಯಶಸ್ವಿಗೊಳಿಸಬೇಕೆಂದು ಚಿತ್ರತಂಡದವರು ಮನವಿ ಮಾಡಿಕೊಂಡಿದ್ದಾರೆ.

# ಪ್ರಾಚೀನ ಸ್ಮಾರಕಗಳು ಸಂಸ್ಕೃತಿಯ ರಾಯಭಾರಿಗಳು

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರಾಚೀನ ಕಾಲದ ದೇವಾಲಯಗಳು ಶಾಸನಗಳಾದಿಯಾಗಿ ಅನೇಕ ಸ್ಮಾರಕಗಳು ಭಾರತೀಯ ಸಂಸ್ಕೃತಿಯ ರಾಯಭಾರಿಗಳಾಗಿವೆ ಎಂದು ಪ್ರಾ. ಆರ್.ಎಂ. ಕಲ್ಲನಗೌಡರ ಹೇಳಿದರು.

ಅವರು ಪಟ್ಟಣದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜು ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ ಐತಿಹಾಸಿಕ ಶಿದ್ದೇಶ್ವರ ದೇವಾಲಯದ ಸ್ವಚ್ಛತಾ ಕಾರ್ಯಕ್ರಮದಲ್ಲಿ ಮಾತನಾಡಿ, ಜಗತ್ತಿನಲ್ಲಿ ಭಾರತ ಹೆಚ್ಚು ಪ್ರಾಚೀನ ಸ್ಮಾರಕಗಳನ್ನು ಹೊಂದಿರುವ ದೇಶವಾಗಿದ್ದು, ಪ್ರತಿ ಹಳ್ಳಿಗಳಲ್ಲಿ, ಪಟ್ಟಣ ಪ್ರದೇಶಗಳಲ್ಲಿ ವೈಶಿಷ್ಟ್ಯಪೂರ್ಣವಾದ ಅನೇಕ ಪ್ರಾಚೀನ ಸ್ಮಾರಕಗಳಿವೆ. ಅವುಗಳ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದ್ದು, ವಿದ್ಯಾರ್ಥಿಗಳು ಸ್ಮಾರಕಗಳ ಬಗ್ಗೆ ಹೆಚ್ಚು ಅಭ್ಯಾಸದ ಜೊತೆಯಲ್ಲಿ ಅವುಗಳ ಸಂರಕ್ಷಣೆಯ ಹೊಣೆಗಾರಿಕೆ ಹೊಂದಬೇಕು ಎಂದರು.




ಪ್ರಾಧ್ಯಾಪಕರಾದ ಮಾರುತಿ ಹಾಗೂ ಕೆ.ಎಂ. ಶಿರೂರ ಐತಿಹಾಸಿಕ ಸ್ಮಾರಕಗಳ ಇತಿಹಾಸ ಹಾಗೂ ಅವುಗಳ ಸಂರಕ್ಷಣೆಯ ಕುರಿತು ಮಾಹಿತಿ ನೀಡಿದರು.

### ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾ.ಮೂ ಸಿ.ಎಸ್. ಶಿವನಗೌಡ್ರ

# ಹಕ್ಕುಗಳಂತೆಯೇ ಕರ್ತವ್ಯಗಳನ್ನೂ ಪಾಲಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಸಂವಿದಾನದಡಿ ಇರುವ ನಮ್ಮ ಹಕ್ಕುಗಳಿಗಾಗಿ ನಾವು ಹೋರಾಡುವಂತೆಯೇ ಕರ್ತವ್ಯಗಳನ್ನೂ ಸಹ ಪಾಲಿಸಬೇಕು ಎಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಹೇಳಿದರು.

ಅವರು ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಕಾನೂನು ಮಹಾವಿದ್ಯಾಲಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ವಕೀಲರ ಸಂಘ ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಭಾರತ ಸಂವಿಧಾನವು ನಮ್ಮ ದೇಶದ ಶಕ್ತಿ, ಸಮಾನತೆ, ಸ್ವಾತಂತ್ರ್ಯ ಭ್ರಾತೃತ್ವಗಳಿಂದ ಕೂಡಿದೆ. ನಮ್ಮ ಸಂವಿಧಾನದಲ್ಲಿರುವ ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳನ್ನು ಪ್ರತಿಯೊಬ್ಬರೂ ಅರಿಯಬೇಕು ಎಂದು ತಿಳಿಸಿದರು.

ಮುಖ್ಯ ಕಾನೂನು ನೆರವು ಅಭಿರಕ್ಷಕರಾದ ಎಸ್.ವ್ಹಿ. ಗ್ರಾಮಪುರೋಹಿತ ಮಾತನಾಡಿ, ಸಂವಿಧಾನದಲ್ಲಿ ಇರುವ ಪೀಠಿಕೆಯು ಸಂವಿಧಾನದ ಆತ್ಮ ಇದ್ದಂತೆ ಎಂದು ತಿಳಿಸಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಹೆಚ್.ಸಿ.ಇ.ಎಸ್. ಕಾನೂನು ಮಹಾವಿದ್ಯಾಲಯದ ಚೇರಮನ್ ಹಾಗೂ ಹಿರಿಯ ವಕೀಲರಾದ ಎಸ್.ಕೆ. ಪಾಟೀಲ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರವರು ನ. 26, 1949ರಂದು ದೇಶಕ್ಕೆ ಸಂವಿಧಾನವನ್ನು ಸಮರ್ಪಣೆ ಮಾಡುವ ಮೂಲಕ ದೇಶದ ಸಮಗ್ರ ಅಭಿವೃದ್ಧಿಗೆ ಕಾರಣರಾದರು. ದೇಶದ ಸಾರ್ವಭೌಮತೆ, ಸಮಾನತೆ, ಪ್ರಜೆಗಳ ಹಕ್ಕುಗಳ ರಕ್ಷಣೆ ಸಂವಿಧಾನದಿಂದ ಮಾತ್ರ ಸಾಧ್ಯ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಸಂವಿಧಾನ ಕುರಿತು ಮಾತನಾಡಿದರು. ಇದೇ ಸಂದರ್ಭದಲ್ಲಿ ಸಂವಿಧಾನ ದಿನಾಚರಣೆ ಅಂಗವಾಗಿ ಏರ್ಪಡಿಸಲಾಗಿದ್ದ ಪ್ರಬಂಧ ಸ್ಪರ್ಧೆ, ರಸಪ್ರಶ್ನ ಸ್ಪರ್ಧೆ, ಚರ್ಚಾ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನವನ್ನು ವಿತರಿಸಲಾಯಿತು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಐ. ಹಿರೇಮನಿಪಾಟೀಲ ಮಾತನಾಡಿ, ಭಾರತ ಸಂವಿಧಾನ ರಚನೆಯಾಗುವಲ್ಲಿ ಅನೇಕ ವಕೀಲರು ಕಾರಣಿಭೂತರಾಗಿದ್ದಾರೆ. ದೇಶದ ಪ್ರತಿಯೊಬ್ಬ ಪ್ರಜೆಯೂ ನಮ್ಮ ದೇಶದ ಕಾನೂನು ವ್ಯವಸ್ಥೆಯ ಮೌಲ್ಯಗಳನ್ನು ಅರಿತುಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹೆಚ್.ಸಿ.ಇ.ಎಸ್., ಕಾನೂನು ಮಹಾವಿದ್ಯಾಲಯದ ಉಪಾಧ್ಯಕ್ಷರು ರಾಜ್ಯ ವಕೀಲರ ಪರಿಷತ್ ವೆಲ್‌ಫೇರ್ ಟ್ರಸ್ಟ್ ಕಮಿಟಿ ಸದಸ್ಯರಾದ ಎಸ್.ಕೆ. ನದಾಫ್, ಸಹಾಯಕ ಕಾನೂನು ನೆರವು ಅಭಿರಕ್ಷಕರಾದ ಗುರುರಾಜ ಗೌರಿ, ಪ್ರಭಾರಿ ಪ್ರಾಚಾರ್ಯರಾದ ಎಂ.ವಿ. ಹಿರೇಮಠ ಮುಂತಾದವರು ಉಪಸ್ಥಿತರಿದ್ದರು. ಅನುಸೂಯಾ ಆರ್. ಕೇರಿ ವಂದಿಸಿದರು.

# ಹೈನುಗಾರಿಕೆಯಿಂದ ಆರ್ಥಿಕ ಸ್ವಾವಲಂಬನೆ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕೃಷಿಯೊಂದಿಗೆ ಹೈನುಗಾರಿಕೆಯಲ್ಲಿಯೂ ತೊಡಗುವದರಿಂದ ರೈತರು ಆರ್ಥಿಕವಾಗಿ ಸ್ವಾವಲಂಬನೆ ಸಾಧಿಸಬಹುದು ಎಂದು ಎಂ.ಡಿ. ಬಟ್ಟೂರ ಹೇಳಿದರು.

ಅವರು ಬೆಂಗಳೂರಿನಲ್ಲಿ ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಾಹಾಮಂಡಳ ನಿಯಮಿತದಿಂದ ಜರುಗಿದ ಪ್ರಗತಿಪರ ಹೈನುಗಾರರ ತಾಂತ್ರಿಕ ವಿಚಾರಗೋಷ್ಠಿಯಲ್ಲಿ ಧಾರವಾಡ ಹಾಲು ಒಕ್ಕೂಟ ವಿಭಾಗದಲ್ಲಿ ಅತೀ ಹೆಚ್ಚು ಹಾಲು ಉತ್ಪಾದನೆಗಾಗಿ ನೀಡಿದ ಪ್ರಶಸ್ತಿ ಸ್ವೀಕರಿಸಿದ ನಿಮಿತ್ತ ಪಟ್ಟಣದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಭಾರತ ಕೃಷಿ ಪ್ರಧಾನ ದೇಶವಾಗಿದ್ದು, ನಮ್ಮ ಹಿರಿಯರ ಕಾಲದಿಂದಲೂ ನಾವು ಕೃಷಿಯೊಂದಿಗೆ ಹೈನುಗಾರಿಕೆ ಮಾಡಿಕೊಂಡು ಬಂದಿದ್ದೇವೆ. ಹೈನುಗಾರಿಕೆಯಿಂದ ಕೃಷಿಗೆ ಬೇಕಾಗುವ ಸಾವಯವ ಗೊಬ್ಬರ ದೊರೆಯುವುದರ ಜೊತೆಯಲ್ಲಿ ರೈತರು ಆರ್ಥಿಕವಾಗಿ ಸ್ವಾವಲಂಬಿ ಜೀವನ ಸಾಗಿಸಲು ಸಹಕಾರಿಯಾಗುತ್ತದೆ ಎಂದರು.

ಎಂ.ಎಂ. ಜಮಾಲಸಾಬನವರ, ಚಂದ್ರು ಭಜಂತ್ರಿ, ಮಹೇಶ ಛಬ್ಬಿ, ಚನ್ನಪ್ಪ ಹುಲ್ಲೂರ, ಖಾನಸಾಬ ಲಾಡಮ್ಮನವರ, ವಿ.ಡಿ. ಸಿದ್ದನಗೌಡರ, ಚಾಂದಿನಿ ಶಿದ್ದಿ ಇದ್ದರು.

### ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಿಂದ ಕಾನೂನು ಅರಿವು-ನೆರವು ಕಾರ್ಯಕ್ರಮ

# ಮಹಿಳೆಯರು ಕಾನೂನು ಅರಿವು ಹೊಂದಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸುತ್ತ ಸಮಾಜದಲ್ಲಿ ನಾಗರಿಕರು ಸಾಕಷ್ಟು ಪ್ರಜ್ಞಾವಂತರಾಗಿದ್ದರೂ ಕೌಟುಂಬಿಕ ಕಲಹದ ಪ್ರಕರಣಗಳು ಜಾಸ್ತಿ ಬೆಳಕಿಗೆ ಬರುತ್ತಿವೆ. ಮಹಿಳೆಯರು ವರದಕ್ಷಣೆ ಕಿರುಕಳಕ್ಕೆ ನ್ಯಾಯಾಲಯದ ಮುಂದೆ ಹೋಗುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ ಎಂದು ಪ್ರಾಚಾರ್ಯ ಬಿ.ವಿ. ಪಾಟೀಲ ಹೇಳಿದರು.

ಸಮೀಪದ ಲಕ್ಕುಂಡಿ ಗ್ರಾಮದ ಬಿ.ಎಚ್. ಪಾಟೀಲ ಪದವಿಪೂರ್ವ ಕಾಲೇಜನಲ್ಲಿ ಬುಧವಾರ ಗದಗ ನಗರದ ಕೆ.ಎಲ್.ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದ ಕಾನೂನು ಅರಿವು ಘಟಕದ ಸಂಯುಕ್ತಾಶ್ರಯದಲ್ಲಿ ಜರುಗಿದ ಸಂವಿಧಾನ ದಿನಾಚರಣೆ ಹಾಗೂ ಕಾನೂನು ಅರಿವು-ನೆರವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.




ಮಹಿಳೆಯರು ನಿರಂತರವಾಗಿ ವರದಕ್ಷಣೆ ಎಂಬ ಸಮಸ್ಯೆಯನ್ನು ಎದುರಿಸುತ್ತಿದ್ದಾರೆ. ಹೀಗಾಗಿ ಮಹಿಳೆಯರ ರಕ್ಷಣೆಗೆ ಸಾಕಷ್ಟು ಕಾನೂನುಗಳು ಜಾರಿಯಲ್ಲಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಳ್ಳಲು ಮುಂದಾಗಬೇಕು. ಅಲ್ಲದೇ, ಆರ್ಥಿಕವಾಗಿ ತೊಂದರೆ ಅನುಭವಿಸುತ್ತಿರುವವರಿಗೆ ಸಂವಿಧಾನದಡಿಯಲ್ಲಿ ಉಚಿತ ಕಾನೂನು ಅರಿವು ಜೊತೆಗೆ ನೆರವು ಕೂಡ ನೀಡಲಾಗುತ್ತದೆ. ಎಸ್.ಎ ಮಾನ್ವಿ ಕಾನೂನು ಮಹಾವಿದ್ಯಾಲಯದಿಂದ ಈಗಾಗಲೇ ಸಾಕಷ್ಟು ಕಡೆಗಳಲ್ಲಿ ಕಾನೂನು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವದು ಶ್ಲಾಘನೀಯ ಎಂದರು.

ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ಶ್ವೇತಾ ದಂಡಾಪೂರ, ಶಿವಲೀಲಾ ಕಲಬಂಡಿ, ಬಸವರಾಜ ಅಪ್ಪೋಜಿ, ಮುಕ್ತಾ ಹಪಡದ, ಭೀಮಪ್ಪ. ಯಶೋಧ ಕುಂಬಾರ, ಬಸವರಾಜ ಪೂಜಾರ, ಕೆ.ವಿನೋದ, ಆಂಜನೇಯ ಇವರುಗಳು ವರದಕ್ಷಣೆಯಿಂದ ಮಹಿಳೆಯರ ಸಾವು ಕುರಿತು ಕಿರು ನಾಟಕ ಪ್ರದರ್ಶನ ಹಾಗೂ ಗ್ರಾಹಕರ ಸಂರಕ್ಷಣೆ ಕಾಯ್ದೆ ಕುರಿತು ವಿದ್ಯಾರ್ಥಿಗಳಲ್ಲಿ ಕಾನೂನು ಅರಿವು ಮೂಡಿಸಿದರು. ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತಿರಿದ್ದರು. ಉಪನ್ಯಾಸಕ ಎಂ.ಬಿ. ಭಜಂತ್ರಿ ಸ್ವಾಗತಿಸಿ, ವಂದಿಸಿದರು.

ಕಾನೂನು ವಿದ್ಯಾರ್ಥಿನಿ ಮುಕ್ತಾ ಹಡಪದ ಮಾತನಾಡಿ, ದಿನನಿತ್ಯದ ಪ್ರತಿಯೊಂದು ವ್ಯಾಪಾರ, ವಹಿವಾಟುಗಳಲ್ಲಿ ಗ್ರಾಹಕರು ಮೋಸ ಮತ್ತು ವಂಚನೆ ಎದುರಿಸುತ್ತಿದ್ದಾರೆ. ಗ್ರಾಹಕರಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಗ್ರಾಹಕ ಸಂರಕ್ಷಣಾ ಕಾಯ್ದೆ ಜಾರಿಯಲ್ಲಿದೆ. ಅನ್ಯಾಯಕ್ಕೆ ಒಳಗಾದ ಗ್ರಾಹಕರು ಜಿಲ್ಲಾ ಗ್ರಾಹಕರ ನ್ಯಾಯಾಲಯದಲ್ಲಿ ದಾವೆ ಹೂಡಿ ಪರಿಹಾರವನ್ನು ಪಡೆದುಕೊಳ್ಳಬಹುದು ಎಂದುರು.

ಕರ್ನಾಟಕ ಸರ್ಕಾರ

**ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಾರ್ಯಾಲಯ, ಗದಗ ಉಪ ವಿಭಾಗ, ಗದಗ. ಬಿಂಕದಕಟ್ಟಿ-582103 ಮೊಬೈಲ್ ನಂ: 9480175175 ಇ-ಮೇಲ್: acfgadag@gmail.com**

ಕ್ರ.ಸಂ:ಎ2/ಬಿಜಿಟಿ/ಟೆಂಡರ್/ಸಿಆರ್-31/2024-25 ದಿನಾಂಕ : 26-11-2024

**ಇ-ಸಂಗ್ರಹಣೆ ತಂತ್ರಾಂಶದಲ್ಲಿ ಅಲ್ಪಾವಧಿ ಟೆಂಡರ್ ಪ್ರಕಟಣೆ**

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಗದಗ ಪ್ರಾದೇಶಿಕ ಅರಣ್ಯ ವಿಭಾಗದಲ್ಲಿ 2024-25 ನೇ ಸಾಲಿನಲ್ಲಿ ವಿವಿಧ ಲೆಕ್ಕ ಶೀರ್ಷಿಕೆಯಡಿ ಮುಂಗಡ ಕಾಮಗಾರಿ ಜೊತೆ ಸಸಿಗಳನ್ನು ಬೆಳೆಸುವುದು, ನರ್ಸರಿ ಕಾಮಗಾರಿಗಳು, ರಕ್ಷಣಾ ಕಾಮಗಾರಿಗಳು ಹಾಗೂ ಸಿವಿಲ್ ಕಾಮಗಾರಿಗಳನ್ನು ಕೈಗೊಳ್ಳಲು ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮ ಮತ್ತು ಕಾಯಿದೆಯಡಿ ಕರ್ನಾಟಕ ಸಾರ್ವಜನಿಕ ಸಂಗ್ರಹಣಾ ತಿಳುವಳಿಕೆಗೋಸ್ಕರ ಇ-ಪೋರ್ಟಲ್ **https://kppp.karnataka.gov.in** ಮುಖಾಂತರ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ಸಲ್ಲಿಸಲು ಪ್ರಾರಂಭ ದಿನಾಂಕ : **26-11-2024**, ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ : **04-12-2024** ಮತ್ತು ತಾಂತ್ರಿಕ ಬಿಡ್ ತೆರೆಯುವ ದಿನಾಂಕ : **06-12-2024** ಹಾಗೂ ಆರ್ಥಿಕ ಬಿಡ್ ತೆರೆಯುವ ದಿನಾಂಕ : **09-12-2024**. ಟೆಂಡರ್‌ಗಿಟ್ಟ ಗರಿಷ್ಟ ಮೊತ್ತ ರೂ. **30.00** ಲಕ್ಷ ಹಾಗೂ ಕನಿಷ್ಟ ಮೊತ್ತ ರೂ. **6.00** ಲಕ್ಷ.

| ಕ್ರ. ಸಂ | ಕಾಮಗಾರಿ ಇಂಡೆಂಟ್ ವಿವರ | ಅಂದಾಜು ಮೊತ್ತ | ಇಎಂಡಿ ಮೊತ್ತ |
|---|---|---|---|
| 1 | KFD/2024-25/OW/WORK_INDENT15483 | 16,44,500.00 | 41,112.00 |
| 2 | KFD/2024-25/OW/WORK_INDENT15484 | 16,44,500.00 | 41,112.00 |
| 3 | KFD/2024-25/OW/WORK_INDENT15485 | 15,31,000.00 | 38,275.00 |
| 4 | KFD/2024-25/OW/WORK_INDENT15402 | 7,00,000.00 | 17,500.00 |
| 5 | KFD/2024-25/OW/WORK_INDENT15403 | 6,00,000.00 | 15,000.00 |
| 6 | KFD/2024-25/OW/WORK_INDENT15358 | 7,00,000.00 | 17,500.00 |
| 7 | KFD/2024-25/OW/WORK_INDENT15319 | 30,00,000.00 | 75,000.00 |

**ಒಂದೊಮ್ಮೆ ಸದರಿ ದಿನಾಂಕದಂದು ಸದರಿ ಟೆಂಡರ್ ಯಶಸ್ವಿಯಾಗದಿದ್ದಲ್ಲಿ ಮರು ಟೆಂಡರ ವಿವರ. (ಮರು ಟೆಂಡರಿಗೆ ಪ್ರತ್ಯೇಕ ನೋಟಿಫಿಕೇಷನ್ ನೀಡಲಾಗುವುದಿಲ್ಲ.)**

ಟೆಂಡರ್‌ಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿ ಹಾಗೂ ವಿವರಗಳಿಗಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣಾ ಇ-ಪೋರ್ಟಲ್ **(https://kppp.karnataka.gov.in)** ಮೂಲಕ ಪರಿಶೀಲಿಸತಕ್ಕದ್ದು. ಹಾಗೂ ಹೆಚ್ಚಿನ ಮಾಹಿತಿ ವಿವರಗಳಿಗಾಗಿ ಈ ಕೆಳಸಹಿದಾರರ ಕಛೇರಿಯ ವೇಳೆಯಲ್ಲಿ ಸಂಪರ್ಕಿಸತಕ್ಕದ್ದು.

**ಸಹಿ/- ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ,**
**ಗದಗ ಉಪ ವಿಭಾಗ, ಗದಗ.**

ವಾಸಾಸಂಇ/ಗದಗ/ಕೆ.ಎಸ್ಎಂ.ಸಿ.ಎ/417/2024-25

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka